ಸಂಪುಟ : 11 ಸಂಚಿಕೆ: 95 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 15 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 95 Pages : 4+2 Price : 3.00 Friday May 15 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಲಬುರಗಿ-ದಾಂಡೇಲಿ ನಾನ್ ಎಸಿ ಸ್ಲೀಪರ್ ಬಸ್ ಸೇವೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕಲಬುರಗಿ-ದಾಂಡೇಲಿ ನಡುವೆ ನಾನ್ ಎಸಿ ಸ್ಲೀಪರ್ ಬಸ್ ಸೇವೆ ಆರಂಭಿಸಲಾಗಿದೆ.

ಕಲಬುರಗಿ ವಿಭಾಗ-1ರ ಘಟಕ-1 ವತಿಯಿಂದ ಪ್ರಾರಂಭಿಸಲಾದ ಈ ಸಾರಿಗೆ ಸೇವೆ ಜೇವರ್ಗಿ, ಶಹಾಪುರ, ಲಿಂಗಸಗೂರ, ಕುಷ್ಟಗಿ, ಗದಗ, ಹುಬ್ಬಳ್ಳಿ ಹಾಗೂ ಧಾರವಾಡ ಮಾರ್ಗವಾಗಿ ಸಂಚರಿಸಲಿದೆ.

ಕಲಬುರಗಿ ಬಸ್ ನಿಲ್ದಾಣದಿಂದ ರಾತ್ರಿ 10 ಗಂಟೆಗೆ ಹೊರಡುವ ಬಸ್, ಮರುದಿನ ಬೆಳಿಗ್ಗೆ 8.30ಕ್ಕೆ ದಾಂಡೇಲಿ ತಲುಪಲಿದೆ. ದಾಂಡೇಲಿ ಬಸ್ ನಿಲ್ದಾಣದಿಂದ ಸಂಜೆ 6.30ಕ್ಕೆ ಹೊರಡುವ ಬಸ್, ಮರುದಿನ ಬೆಳಿಗ್ಗೆ 5 ಗಂಟೆಗೆ ಕಲಬುರಗಿ ತಲುಪಲಿದೆ.

ದಾಂಡೇಲಿ ಸೇರಿದಂತೆ ವಿವಿಧ ಪ್ರೇಕ್ಷಣೀಯ ಸ್ಥಳಗಳಿಗೆ ಪ್ರಯಾಣಿಸುವ ಸಾರ್ವಜನಿಕರಿಗೆ ಅನುಕೂಲವಾಗುವ ಉದ್ದೇಶದಿಂದ ಈ ಸೇವೆ ಆರಂಭಿಸಲಾಗಿದ್ದು, ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸಿ ಸದುಪಯೋಗ ಪಡೆದುಕೊಳ್ಳುವಂತೆ ನಿಗಮ ಮನವಿ ಮಾಡಿದೆ.

## ಮದ್ಯದ ದರ ಇಳಿಕೆಗೆ ಬಿಜೆಪಿ ಯುವ ಮೋರ್ಚಾ ವಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರ ಮದ್ಯ ಹಾಗೂ ಬಿಯರ್ ದರ ಇಳಿಕೆ ಮಾಡಿರುವ ಕ್ರಮವನ್ನು ಖಂಡಿಸಿ ಭಾರತೀಯ ಜನತಾ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಯುವಕರನ್ನು ಮಾದಕ ವ್ಯಸನದತ್ತ ಸೆಳೆಯುವ ಉದ್ದೇಶದಿಂದಲೇ ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದು ಆರೋಪಿಸಿರುವ ಅವರು, ತಕ್ಷಣವೇ ಈ ನೀತಿಯನ್ನು ಹಿಂಪಡೆಯದಿದ್ದರೆ ಜಿಲ್ಲಾದ್ಯಂತ ಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಉದ್ಯೋಗ, ತಾಂತ್ರಿಕ ತರಬೇತಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಸೌಲಭ್ಯ ಕಲ್ಪಿಸುವ ಬದಲು ಸರ್ಕಾರ ಕಡಿಮೆ ದರದಲ್ಲಿ ಮದ್ಯ ನೀಡಲು ಮುಂದಾಗಿರುವುದು ದುರಂತಕರ ಬೆಳವಣಿಗೆ ಎಂದು ಅವರು ಟೀಕಿಸಿದರು. ಮದ್ಯದ ದರ ಇಳಿಕೆಯಿಂದ ವಿದ್ಯಾರ್ಥಿಗಳು ಹಾಗೂ ಯುವಕರು ದುಷ್ಪರಿಣಾಮಕ್ಕೆ ಒಳಗಾಗುವ ಸಾಧ್ಯತೆ ಇದ್ದು, ಶಿಕ್ಷಣ ಸಂಸ್ಥೆಗಳ ವಾತಾವರಣಕ್ಕೂ ಹಾನಿಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ನೀತಿ ವಿರುದ್ಧ ವಿದ್ಯಾರ್ಥಿ ಸಂಘಟನೆಗಳು, ಯುವಕ ಸಂಘಗಳು ಹಾಗೂ ಪೋಷಕರು ಕೈಜೋಡಿಸಬೇಕೆಂದು ಕರೆ ನೀಡಿರುವ ಅವರು, ಸರ್ಕಾರ ಆದೇಶ ಹಿಂಪಡೆಯದಿದ್ದರೆ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

### ಪೊಲೀಸರಿಗೆ ಫ್ರೀ ಹ್ಯಾಂಡ್ ನೀಡಿದ ಸಚಿವ ಸಂತೋಷ ಲಾಡ್– ಜಿಲ್ಲೆಯನ್ನು ದುಶ್ಚಟ ಮುಕ್ತಗೊಳಿಸಲು ಕಟ್ಟುನಿಟ್ಟಿನ ಸೂಚನೆ

# 'ಡ್ರಗ್ಸ್ ಮಾಫಿಯಾಗೆ ಲಾಡ್ ಲಾಠಿ'

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ ಡ್ರಗ್ಸ್, ಗಾಂಜಾ, ಅಫೀಮು ಹಾಗೂ ವಿವಿಧ ಅಪರಾಧ ಚಟುವಟಿಕೆಗಳಿಗೆ ಸಂಪೂರ್ಣ ಕಡಿವಾಣ ಹಾಕಲು ಪೊಲೀಸ್ ಇಲಾಖೆಗೆ ಸಂಪೂರ್ಣ ಫ್ರೀ ಹ್ಯಾಂಡ್ ನೀಡಲಾಗಿದೆ ಎಂದು ಕಾರ್ಮಿಕ ಇಲಾಖೆ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಘೋಷಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲಾ ಹಾಗೂ ಮಹಾನಗರ ಪೊಲೀಸ್ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುವವರು, ಅದಕ್ಕೆ ಕುಮ್ಮಕ್ಕು ನೀಡುವವರು ಹಾಗೂ ಡ್ರಗ್ಸ್-ಗಾಂಜಾ ಜಾಲದಲ್ಲಿ ತೊಡಗಿರುವವರ

> "ಅಪರಾಧಿಗಳು ಹಾಗೂ ಡ್ರಗ್ಸ್ ಜಾಲದಲ್ಲಿ ತೊಡಗಿರುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಿ. ಧಾರವಾಡ ಜಿಲ್ಲೆ ಶೀಘ್ರದಲ್ಲೇ ಅಪರಾಧಮುಕ್ತ ಜಿಲ್ಲೆಯಾಗಿ ರೂಪುಗೊಳ್ಳಬೇಕು."
>
> – **ಸಂತೋಷ ಲಾಡ್,** ಜಿಲ್ಲಾ ಉಸ್ತುವಾರಿ ಸಚಿವ



ವಿರುದ್ಧ ಯಾವುದೇ ಮುಲಾಜಿಲ್ಲದೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಕಳೆದ ಐದಾರು ತಿಂಗಳಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಇಳಿಕೆಯಾಗಿದ್ದರೂ, ಸಂಪೂರ್ಣ ನಿಯಂತ್ರಣ ಸಾಧ್ಯವಾಗಿಲ್ಲ. ಡ್ರಗ್ಸ್ ಹಾಗೂ ಗಾಂಜಾ ಸೇವನೆ ಮತ್ತು ಮಾರಾಟ ಕಡಿಮೆಯಾಗಿದ್ದರೂ, ಇನ್ನೂ ಸಂಪೂರ್ಣ ನಿಂತಿಲ್ಲ ಎಂಬುದು ಆತಂಕಕಾರಿ ಬೆಳವಣಿಗೆ ಎಂದು ಸಚಿವರು ಹೇಳಿದರು.

ಪ್ರತಿ ಪ್ರಕರಣವನ್ನು ಕೆಳಮಟ್ಟದಿಂದಲೇ ಕೂಲಂಕುಷವಾಗಿ ತನಿಖೆ ನಡೆಸಿ, ನಿಜವಾದ ಅಪರಾಧಿಗಳನ್ನು ಪತ್ತೆಹಚ್ಚಬೇಕು. ಅಪರಾಧಿ ಮನೋಭಾವದವರಿಗೆ ಪೊಲೀಸ್ ಖದರ ತೇ-ೂರಿಸಿ, ನಿಯಮಾನುಸಾರ ಕಾನೂನು ಕ್ರಮ ಜರುಗಿಸಬೇಕು ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಠಾಣಾ ಮತ್ತು ವೃತ್ತ ಮಟ್ಟದ ಅಧಿಕಾರಿಗಳು ರಾತ್ರಿ ವೇಳೆ ಜಿಲ್ಲೆಯಲ್ಲಿ ಸಂಚರಿಸಿ, ಅನಿರೀಕ್ಷಿತ ಭೇಟಿ ನೀಡಿ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆ ಪರಿಶೀಲಿಸಬೇಕು. ಪ್ರತೀ ತಿಂಗಳು ಅಧಿಕಾರಿಗಳು ಖುದ್ದು ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

**ಶಾಲೆ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಿ**

ಶಾಲೆ, ಕಾಲೇಜುಗಳು, ಸಾರ್ವಜನಿಕ ಸ್ಥಳಗಳು ಹಾಗೂ ಗ್ರಾಮ-ಪಟ್ಟಣ ಪ್ರದೇಶಗಳಲ್ಲಿ ಡ್ರಗ್ಸ್ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ವ್ಯಾಪಕ ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಶಿಕ್ಷಕರು, ಸಮಾಜದ ಗಣ್ಯರು ಹಾಗೂ ಜನಾಭಿಪ್ರಾಯ ರೂಪಿಸುವವರನ್ನು ಅಪರಾಧಮುಕ್ತ ಜಿಲ್ಲೆಯ ಅಭಿಯಾನದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಸಚಿವ ಸಂತೋಷ ಲಾಡ್ ಸಲಹೆ ನೀಡಿದರು.

"ಧಾರವಾಡ ಜಿಲ್ಲೆ ವಿದ್ಯಾವಂತರ ನಾಡು, ಸಾಹಿತ್ಯ-ಸಂಸ್ಕೃತಿಯ ನೆಲ ಎಂಬ ಹೆಗ್ಗಳಿಕೆ ಹೊಂದಿದೆ. ಈ ಗೌರವ ಉಳಿಯಬೇಕಾದರೆ ಜಿಲ್ಲೆಯನ್ನು ಅಪರಾಧಮುಕ್ತಗೊಳಿಸುವ ಜವಾಬ್ದಾರಿ ಎಲ್ಲರ ಮೇಲಿದೆ" ಎಂದು ಸಚಿವರು ಹೇಳಿದರು.

ಯಾರ ಶಿಫಾರಸ್ಸು, ಒತ್ತಡಕ್ಕೂ ಮಣಿಯದೇ ಕಾನೂನುಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು.

▸▸3ನೇ ಪುಟಕ್ಕೆ

### ಪುರಸಭೆ ಕಲಾ ಮಹಾವಿದ್ಯಾಲಯ ಆವರಣದ ಕಾಮಗಾರಿ ಸ್ಥಳಾಂತರಕ್ಕೆ ಕರವೇ ಸ್ವಾಭಿಮಾನಿ ಸೇನೆ-ದಲಿತ ಯುವ ಮುನ್ನಡೆ ಆಗ್ರಹ

# 'ಕಾಲೇಜು ಕ್ಯಾಂಪಸ್‌ನಲ್ಲಿ ಜಲಾಗಾರ ಬೇಡ'

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಕಲಾ ಮಹಾವಿದ್ಯಾಲಯ ಕ್ಯಾಂಪಸ್‌ನಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನಿರ್ಮಾಣಗೊಳ್ಳುತ್ತಿರುವ ಬೃಹತ್ ಜಲಾಗಾರ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಿ ಬೇರೆಡೆ ಸ್ಥಳಾಂತರಿಸಬೇಕು ಎಂದು ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ಹಾಗೂ ದಲಿತ ಯುವ ಮುನ್ನಡೆ ರಾಜ್ಯಾಧ್ಯಕ್ಷ ಡಿ.ಬಿ. ಫಕ್ಕೀರಪ್ಪ ನೇತೃತ್ವದಲ್ಲಿ ಒತ್ತಾಯಿಸಲಾಯಿತು.

ಈ ವೇಳೆ ಮಾತನಾಡಿದ ಶರಣು ಗೋಡಿ, ಪುರಸಭೆ ಕಲಾ ಮಹಾವಿದ್ಯಾಲಯಕ್ಕೆ ನೂರಾರು ವರ್ಷಗಳ ಸಾಧನಾ ಶ್ರೇಷ್ಠ ಇತಿಹಾಸವಿದೆ. ಕೆಲವೇ ದಿನಗಳಲ್ಲಿ ಈ ಪದವಿ ಕಾಲೇಜು ಸರ್ಕಾರಕ್ಕೆ ಹಸ್ತಾಂತರವಾಗಲಿದ್ದು, ಕಾಲೇಜು ಕಟ್ಟಡ ಸೇರಿ ಒಟ್ಟು 2 ಎಕರೆ 17 ಗುಂಟೆ ಜಾಗ ಮಾತ್ರ ಇದೆ. ಇದರಲ್ಲಿ ಕಾಲೇಜು ಕಟ್ಟಡ, ಗ್ರಂಥಾಲಯ ಹಾಗೂ ಕಾರ್ಯಾಲಯ ನಿರ್ಮಾಣಗೊಂಡಿವೆ. ಉಳಿದ ಅಲ್ಪಸ್ವಲ್ಪ ಖಾಲಿ ಜಾಗದಲ್ಲಿ ಜಲಾಗಾರ ನಿರ್ಮಿಸಿದರೆ ಭವಿಷ್ಯದಲ್ಲಿ ಶಿಕ್ಷಣ, ಕ್ರೀಡೆ ಹಾಗೂ ಇತರ ಪಠ್ಯೇತರ ಚಟುವಟಿಕೆಗಳಿಗೆ ಜಾಗವೇ ಇಲ್ಲದಂತಾಗುತ್ತದೆ ಎಂದು



ಆತಂಕ ವ್ಯಕ್ತಪಡಿಸಿದರು.

ಈಗಾಗಲೇ ಇದೇ ಕ್ಯಾಂಪಸ್‌ನಲ್ಲಿ ಕೇಂದ್ರ ಹವಾಮಾನ ಇಲಾಖೆಯ ಮ್ಯಾಪಿಂಗ್ ಸೆಂಟರ್ ಅಳವಡಿಸಲಾಗಿದ್ದು, ಈ ಪ್ರದೇಶದಲ್ಲಿ ಯಾವುದೇ ಒತ್ತುವರಿ ಅಥವಾ ಅಡಚಣೆ ಮಾಡಬಾರದು ಎಂಬ ಸೂಚನೆ ನೀಡಲಾಗಿದೆ. ಮುಖ್ಯವಾಗಿ ಕಾಲೇಜು ನಿರ್ಮಾಣ ಹಾಗೂ ಶೈಕ್ಷಣಿಕ ಉದ್ದೇಶಕ್ಕಾಗಿ ಈ ಭೂಮಿಯನ್ನು ದಾನ ಮಾಡಲಾಗಿದೆ. ಇಂತಹ ಜಾಗದಲ್ಲಿ ಜಲಾಗಾರ ನಿರ್ಮಿಸಿದರೆ ಕಾಲೇಜಿನ ಭವಿಷ್ಯದ ಅಭಿವೃದ್ಧಿಗೆ ದೊಡ್ಡ ಅಡ್ಡಿಯಾಗುವುದಲ್ಲದೇ, ಶಿಕ್ಷಣ ಪ್ರೇಮಿಗಳ ಭಾವನೆಗಳಿಗೆ ಧಕ್ಕೆ ಉಂಟಾಗುತ್ತದೆ ಎಂದು ಹೇಳಿದರು.

ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಗೆ ತಮ್ಮ ವಿರೋಧ ಇಲ್ಲ. ಆದರೆ ಜಲಾಗಾರ ನಿರ್ಮಾಣಕ್ಕೆ ಪಟ್ಟಣದಲ್ಲಿ ಸಾಕಷ್ಟು ಸಿಎ ಸೈಟ್‌ಗಳು ಲಭ್ಯವಿದ್ದು, ಬೇರೆ ಸ್ಥಳದಲ್ಲಿ ನಿರ್ಮಿಸಬೇಕು. ಈಗಾಗಲೇ ಪಟ್ಟಣದಲ್ಲಿ


> "ಕಾಮಗಾರಿ ಸ್ಥಳಾಂತರಿಸದಿದ್ದರೆ ಸಂಘಟನೆಗಳು ಹಾಗೂ ಹಳೆಯ ವಿದ್ಯಾರ್ಥಿಗಳೊಂದಿಗೆ ಸೇರಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುತ್ತೇವೆ."
>
> – **ಶರಣು ಗೋಡಿ,** ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ

ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ ನಾಲ್ಕೈದು ಜಲಾಗಾರಗಳು ನಿರುಪಯುಕ್ತವಾಗಿ ಬಿದ್ದಿವೆ. ಅವುಗಳನ್ನು ಬಳಕೆ ಮಾಡಿಕೊಳ್ಳಬಹುದು ಎಂದು ಸಲಹೆ ನೀಡಿದರು.

ಸಾಕಷ್ಟು ವಿರೋಧ ವ್ಯಕ್ತವಾಗಿದ್ದರೂ ಗುತ್ತಿಗೆದಾರರು ರಾಜಕೀಯ ಪ್ರಭಾವ ಹಾಗೂ ಕೆಲ ರಾಜಕಾರಣಿಗಳ ಕುಮ್ಮಕ್ಕಿನಿಂದ ಜಿದ್ದಿಗೆ ಬಿದ್ದಂತೆ ವರ್ತಿಸುತ್ತಿದ್ದಾರೆ. ಕಾಮಗಾರಿ ಸ್ಥಳಾಂತರಿಸದಿದ್ದರೆ ಕರವೇ ಸ್ವಾಭಿಮಾನಿ ಸೇನೆ, ದಲಿತ ಯುವ ಮುನ್ನಡೆ ಸಂಘಟನೆ ಹಾಗೂ ಕಾಲೇಜಿನ ಹಳೆಯ ವಿದ್ಯಾರ್ಥಿಗಳೊಂದಿಗೆ ಸೇರಿ ಕಾಮಗಾರಿ ಸ್ಥಳದಲ್ಲೇ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

▸▸3ನೇ ಪುಟಕ್ಕೆ

## ನ್ಯಾಷನಲ್ ಮ್ಯೂಸಿಯಂಗೆ ಸಚಿವ ಎಚ್.ಕೆ. ಪಾಟೀಲ ಭೇಟಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ ಅವರು ಗುರುವಾರ ದೆಹಲಿಯ ರಾಷ್ಟ್ರೀಯ ಮ್ಯೂಸಿಯಂಗೆ ಭೇಟಿ ನೀಡಿ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ವಿವಿಧ ಕಲಾಕೃತಿಗಳು ಮತ್ತು ಪುರಾತನ ವಸ್ತುಗಳನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಮ್ಯೂಸಿಯಂನಲ್ಲಿನ ಸಂಗ್ರಹಗಳ ಕುರಿತು ಮಾಹಿತಿ ಪಡೆದು, ದೇಶದ ಸಾಂಸ್ಕೃತಿಕ ಪರಂಪರೆ ಸಂರಕ್ಷಣೆಯಲ್ಲಿ ರಾಷ್ಟ್ರೀಯ ಮ್ಯೂಸಿಯಂ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು.

### ಯುವಜನತೆ ಮೌಲ್ಯಾಧಾರಿತ ಜೀವನ ರೂಪಿಸಿಕೊಳ್ಳಬೇಕು: ಅಲ್ಲಮಪ್ರಭು ಬೆಟ್ಟದೂರು

# ಅಂಗಳದಲ್ಲಿ ಮುದುಕರು, ಮೊಬೈಲ್‌ನಲ್ಲಿ ಯುವಕರು!

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

"ಇಂದು ಮುದುಕರು ಅಂಗಳದಲ್ಲಿ ಕಾಲ ಕಳೆಯುತ್ತಿದ್ದರೆ, ಯುವಕರು ಮೊಬೈಲ್‌ನಲ್ಲಿ ಮುಳುಗಿದ್ದಾರೆ" ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಅಲ್ಲಮಪ್ರಭು ಬೆಟ್ಟದೂರು ಹೇಳಿದರು.

ನಗರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಆಯೋಜಿಸಿದ್ದ 2025-26ನೇ ಸಾಲಿನ ಸಹಪಠ್ಯ ಚಟುವಟಿಕೆಗಳ ಸಮಾರೋಪ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣು ಮಕ್ಕಳು ಶಿಕ್ಷಣ ಪಡೆದರೆ ಒಂದು ಶಾಲೆ ತೆರೆದಂತಾಗುತ್ತದೆ. ಮಹಿಳೆಯರು ಅಕ್ಷರ ಜ್ಞಾನ ಹೊಂದಿದರೆ ಕುಟುಂಬ ನಿರ್ವಹಣೆ ಸುಲಭವಾಗುತ್ತದೆ. ಮಹಿಳೆಯರಿಗೆ ಎಲ್ಲ ಕ್ಷೇತ್ರಗಳಲ್ಲೂ ಪ್ರಾಮುಖ್ಯತೆ ಸಿಕ್ಕರೆ ದೇಶದ ಅಭಿವೃದ್ಧಿ ವೇಗವಾಗುತ್ತದೆ ಎಂದು ಹೇಳಿದರು.

ಮಹಿಳೆಯರ ಹೆಸರಿನಲ್ಲಿ ಸಮಾನತೆ ಹೇಳಲಾಗುತ್ತಿದೆಯಾದರೂ, ಅನೇಕ



ಕಡೆಗಳಲ್ಲಿ ಶೋಷಣೆ ನಡೆಯುತ್ತಿದೆ. ವಿದ್ಯಾರ್ಥಿನಿಯರು ಶೈಕ್ಷಣಿಕ ಹಾಗೂ ಸಾಂಸ್ಕೃತಿಕವಾಗಿ ಬೆಳೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕನ್ನಡ ವಿಶ್ವವಿದ್ಯಾಲಯದ ಸಾಹಿತ್ಯ ಅಧ್ಯಯನ ವಿಭಾಗದ ಪ್ರಾಧ್ಯಾಪಕ ವೆಂಕಟಗಿರಿ ದಳವಾಯಿ ಮಾತನಾಡಿ, ಮಹಿಳೆಯರ ಜ್ಞಾನ, ಸಾಮರ್ಥ್ಯ ಹಾಗೂ ಧೈರ್ಯವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಮಹಿಳೆಯರು ಆರ್ಥಿಕ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕವಾಗಿ ಸಬಲರಾಗಬೇಕು. ಉನ್ನತ ಶಿಕ್ಷಣ ವ್ಯಕ್ತಿತ್ವ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾಲೇಜಿನ ಸಾಂಸ್ಕೃತಿಕ ಘಟಕದ ಸಂಚಾಲಕಿ ಹುಲಿಗೆಮ್ಮ ವಾರ್ಷಿಕ ವರದಿ ಮಂಡಿಸಿದರು. ಭೌತಶಾಸ್ತ್ರ ವಿಭಾಗದಲ್ಲಿ ಚಿನ್ನದ ಪದಕ ಪಡೆದ ವಿದ್ಯಾರ್ಥಿನಿ ಶ್ವೇತಾಳನ್ನು ಸನ್ಮಾನಿಸಲಾಯಿತು.

ಕ್ರೀಡೆ, ಸ್ಕೌಟ್ ಮತ್ತು ಗೈಡ್ಸ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಣ ಪ್ರೇಮಿ ಬಿ.ಜಿ. ಕರಿಗಾರ, ಪ್ರಾಚಾರ್ಯ ಗಣಪತಿ ಲಮಾಣಿ, ಉಪನ್ಯಾಸಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

**'ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷೆ ರದ್ದು: ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯ ಬಯಲು'-ಅಶೋಕ ಮಂದಾಲಿ ಆರೋಪ**

# ನೀಟ್ ಮಹಾಹಗರಣದಿಂದ ವಿದ್ಯಾರ್ಥಿಗಳ ಭವಿಷ್ಯ ಹಾಳು!

■ **ವಿಜಯಸಾಕ್ಷಿ ಸುದ್ದಿ, ಗದಗ**

2026ರ ನೀಟ್ ಪರೀಕ್ಷೆ ಹಗರಣದಲ್ಲಿ ಭ್ರಷ್ಟ ಬಿಜೆಪಿ ಸರ್ಕಾರದ ಕೈವಾಡ ಬಯಲಾಗಿದ್ದು, ಲಕ್ಷಾಂತರ ವೈದ್ಯಕೀಯ ವಿದ್ಯಾರ್ಥಿಗಳ ಕನಸಿಗೆ ಕೇಂದ್ರ ಸರ್ಕಾರ ಕೊಳ್ಳಿ ಇಟ್ಟಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ದೇಶಾದ್ಯಂತ ವೈದ್ಯಕೀಯ ಶಿಕ್ಷಣ ಪ್ರವೇಶಾತಿಗಾಗಿ ನಡೆದಿದ್ದ ನೀಟ್ ಯುಜಿ-2026 ಪರೀಕ್ಷೆಯನ್ನು ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಓಖಿಂ) ಅಧಿಕೃತವಾಗಿ ರದ್ದುಪಡಿಸಿರುವುದು 22.7 ಲಕ್ಷ ವಿದ್ಯಾರ್ಥಿಗಳ ಭವಿಷ್ಯವನ್ನು ಅತಂತ್ರಕ್ಕೆ ತಳ್ಳಿದೆ ಎಂದು ಕಿಡಿಕಾರಿದ್ದಾರೆ.



2026ರ ನೀಟ್ ಹಗರಣದ ತನಿಖೆಯನ್ನು ಸಿಬಿಐಗೆ ನೀಡಲಾಗಿದ್ದು, ಸೋರಿಕೆಯಾದ ಪ್ರಶ್ನೆಪತ್ರಿಕೆಯನ್ನು ₹30 ಲಕ್ಷಕ್ಕೆ ಖರೀದಿಸಿದ ಆರೋಪದ ಮೇಲೆ ರಾಜಸ್ಥಾನದ ಜಾಮಾ ರಾಮಗಢದ ಬಿಜೆಪಿ ನಾಯಕ ದಿನೇಶ್ ರಾವಲ್ ಮತ್ತು ಅವರ ಸಹೋದರರನ್ನು ಬಂಧಿಸಿರುವುದು ಪ್ರಕರಣದ ಗಂಭೀರತೆಯನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ.

> "ಒಂದು ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಲು ಆಗದ ಕೇಂದ್ರ ಬಿಜೆಪಿ ಸರ್ಕಾರ ದೇಶವನ್ನು ಹೇಗೆ ನಡೆಸುತ್ತದೆ ಎಂಬ ಪ್ರಶ್ನೆ ಉದ್ಭವಿಸಿದೆ. ನೀಟ್ ಪರೀಕ್ಷೆಯ ಮೇಲಿನ ವಿಶ್ವಾಸ ವಿದ್ಯಾರ್ಥಿಗಳಲ್ಲಿ ಕುಸಿದಿದ್ದು, ವೈದ್ಯಕೀಯ ಶಿಕ್ಷಣ ವ್ಯವಸ್ಥೆಯೇ ಸಂಕಷ್ಟಕ್ಕೆ ಸಿಲುಕಿದೆ."
>
> – **ಅಶೋಕ ಮಂದಾಲಿ,** ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ

ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನೀಟ್ ಪರೀಕ್ಷೆಯನ್ನೇ ಸಮರ್ಪಕವಾಗಿ ನಡೆಸಲು ಆಗದ ಕೇಂದ್ರ ಬಿಜೆಪಿ ಸರ್ಕಾರ, 2025-26ರ ಕೇಂದ್ರ ಬಜೆಟ್‌ನಲ್ಲಿ 10 ಸಾವಿರ ವೈದ್ಯಕೀಯ ಸೀಟು ಹೆಚ್ಚಳ ಮಾಡುವುದಾಗಿ ಹೇಳುವುದರಿಂದ ಏನು ಪ್ರಯೋಜನ ಎಂದು ಪ್ರಶ್ನಿಸಿದ್ದಾರೆ.

ಕರ್ನಾಟಕದಲ್ಲಿ ನಡೆದ ಕೆಎಎಸ್ ಪರೀಕ್ಷೆಯ ಜನವರಿ ವಿಷಯದ ಕುರಿತು ಪ್ರಶ್ನೆ ಮಾಡುತ್ತಿದ್ದ ಬಿಜೆಪಿ ನಾಯಕರು, ದೇಶಾದ್ಯಂತ 2026ರ ಮೇ 3ರಂದು ನಡೆದಿದ್ದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಪರೀಕ್ಷೆಯೇ ರದ್ದು ಆಗಿರುವ ಬಗ್ಗೆ ಮೌನ ವಹಿಸಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯದಿಂದ ವೈದ್ಯಕೀಯ ಶಿಕ್ಷಣಕ್ಕಾಗಿ ಇರುವ ನೀಟ್ ಪರೀಕ್ಷೆಯ ಮೇಲಿನ ವಿಶ್ವಾಸವೇ ಕುಸಿದಿದ್ದು, ಪ್ರತಿವರ್ಷ 20ರಿಂದ 25 ಸಾವಿರ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣಕ್ಕಾಗಿ ವಿದೇಶಗಳಿಗೆ ತೆರಳುತ್ತಿದ್ದಾರೆ ಎಂದು ತಿಳಿಸಿದ್ದಾರೆ.

2025ರಲ್ಲಿ 22.09 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಇದರಲ್ಲಿ ಶೇ.55.97ರಷ್ಟು ವಿದ್ಯಾರ್ಥಿಗಳು ಮಾತ್ರ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕೆ ಅರ್ಹತೆ ಪಡೆದಿದ್ದಾರೆ. 2024ರಲ್ಲಿ ನಡೆದ ನೀಟ್ ಹಗರಣವನ್ನು ಸಿಬಿಐ ತನಿಖೆಗೆ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಕೇವಲ ಎರಡು ವರ್ಷಗಳಲ್ಲೇ ಮತ್ತೆ 2026ರಲ್ಲಿ ಹಗರಣ ನಡೆಯುತ್ತಿರುವುದು ಕೇಂದ್ರ ಸರ್ಕಾರ ಯಾರನ್ನು ರಕ್ಷಿಸಲು ಹೊರಟಿದೆ ಎಂಬ ಅನುಮಾನ ಮೂಡಿಸಿದೆ ಎಂದು ಆರೋಪಿಸಿದ್ದಾರೆ.

ಕಳೆದ ಮೂರು ವರ್ಷಗಳಲ್ಲಿ ಎರಡು ಬಾರಿ ನೀಟ್ ಪರೀಕ್ಷೆಯಲ್ಲಿ ಹಗರಣ ನಡೆದಿದ್ದು, ಒಂದು ಪರೀಕ್ಷೆಯನ್ನು ಸಮರ್ಪಕವಾಗಿ ನಡೆಸಲು ಆಗದ ಸರ್ಕಾರ ದೇಶವನ್ನು ಹೇಗೆ ನಡೆಸುತ್ತದೆ ಎಂಬ ಪ್ರಶ್ನೆ ಉದ್ಭವಿಸಿದೆ. ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ನೀಡುವ ಸುಳ್ಳು ಭರವಸೆಯಂತೆಯೇ ನೀಟ್ ಪರೀಕ್ಷೆಯೂ ಹಳ್ಳ ಹಿಡಿಯುತ್ತಿದೆ ಎಂದು ಟೀಕಿಸಿದ್ದಾರೆ. ಭಾರತದಲ್ಲಿ ಪ್ರತಿ 1000 ನಾಗರಿಕರಿಗೆ ಕೇವಲ 1.3 ವೈದ್ಯರು ಮಾತ್ರ ಇದ್ದು, ನೀಟ್ ಪರೀಕ್ಷೆಯಲ್ಲಿನ ನಿರಂತರ ಹಗರಣಗಳಿಂದ ವಿದ್ಯಾರ್ಥಿಗಳು ಪರೀಕ್ಷೆಯ ಮೇಲಿನ ವಿಶ್ವಾಸ ಕಳೆದುಕೊಳ್ಳುತ್ತಿದ್ದಾರೆ. ವೈದ್ಯರ ಕೊರತೆಯನ್ನು ನೀಗಿಸುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಭಾರತದ ಸಾರ್ವಜನಿಕ ಆರೋಗ್ಯ ವೆಚ್ಚವು ಜಿಡಿಪಿಯ ಕೇವಲ 1.94 ಶೇಕಡಷ್ಟಿದ್ದು, ರಾಷ್ಟ್ರೀಯ ಆರೋಗ್ಯ ನೀತಿ-2017ರಲ್ಲಿ ನಿಗದಿಪಡಿಸಿರುವ 2.5 ಶೇಕಡಕ್ಕಿಂತ ಬಹಳ ಕಡಿಮೆ ಇದೆ. ವೈದ್ಯಕೀಯ ಕ್ಷೇತ್ರವನ್ನು ಕೇಂದ್ರ ಸರ್ಕಾರ ಕಡೆಗಣಿಸುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಭಾರತದಲ್ಲಿ ಪ್ರತಿವರ್ಷ 20ರಿಂದ 24 ಲಕ್ಷ ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಬರೆದರೂ, ಅರ್ಹತೆ ಪಡೆದು ವೈದ್ಯರಾಗುವವರು ಕೇವಲ 1 ಲಕ್ಷ ಮಂದಿ ಮಾತ್ರ. 2024ರಲ್ಲಿ 23.33 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಶೇ.56.4ರಷ್ಟು ವಿದ್ಯಾರ್ಥಿಗಳು ಮಾತ್ರ ಅರ್ಹತೆ ಪಡೆದಿದ್ದಾರೆ ಎಂದು ತಿಳಿಸಿದ್ದಾರೆ.

ಪ್ರಸ್ತುತ ಭಾರತದಲ್ಲಿ 822 ವೈದ್ಯಕೀಯ ಕಾಲೇಜುಗಳಿದ್ದು, ಒಟ್ಟು 1.29 ಲಕ್ಷ ವೈದ್ಯಕೀಯ ಸೀಟುಗಳಿವೆ. ಇವುಗಳಲ್ಲಿ 55,648 ಸೀಟುಗಳು ಮಾತ್ರ ಸರ್ಕಾರಿ ಕಾಲೇಜುಗಳಲ್ಲಿ ಇದ್ದು, 50,685 ಸೀಟುಗಳು ಖಾಸಗಿ ಎಂಬಿಬಿಎಸ್ ಕಾಲೇಜುಗಳಿಗೆ ಸೇರಿವೆ ಎಂದು ಮಾಹಿತಿ ನೀಡಿದ್ದಾರೆ.

2026ರ ನೀಟ್ ಪರೀಕ್ಷೆಯಲ್ಲಿ 23 ಲಕ್ಷ ವಿದ್ಯಾರ್ಥಿಗಳು ಸ್ಪರ್ಧಿಸುತ್ತಿರುವ ಸಂದರ್ಭದಲ್ಲಿ ಕೇವಲ 1.29 ಲಕ್ಷ ಸೀಟುಗಳಿರುವುದರಿಂದ 94.6 ಶೇಕಡ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣದ ಕನಸು ನನಸಾಗುವುದಿಲ್ಲ. ಇದರ ಮಧ್ಯೆ ಪರೀಕ್ಷೆ ರದ್ದು ಮಾಡಿರುವುದು ವಿದ್ಯಾರ್ಥಿಗಳ ಭವಿಷ್ಯವನ್ನು ಇನ್ನಷ್ಟು ಸಂಕಷ್ಟಕ್ಕೆ ತಳ್ಳಿದೆ ಎಂದು ಹೇಳಿದ್ದಾರೆ. ಪ್ರಸ್ತುತ ಜಾರ್ಜಿಯಾ, ಕಿರ್ಗಿಸ್ತಾನ್ ಹಾಗೂ ಉಜ್ಬೇಕಿಸ್ತಾನ್‌ನಂತಹ ದೇಶಗಳಲ್ಲಿ ಕಡಿಮೆ ವೆಚ್ಚದಲ್ಲಿ ವೈದ್ಯಕೀಯ ಶಿಕ್ಷಣ ಲಭ್ಯವಿರುವುದರಿಂದ ಸಾವಿರಾರು ಭಾರತೀಯ ವಿದ್ಯಾರ್ಥಿಗಳು ವಿದೇಶಗಳಿಗೆ ತೆರಳುತ್ತಿದ್ದಾರೆ. 2024ರ ವೇಳೆಗೆ ವಿದೇಶದಲ್ಲಿ ವ್ಯಾಸಂಗ ಮಾಡುತ್ತಿರುವ ಭಾರತೀಯ ವಿದ್ಯಾರ್ಥಿಗಳ ಸಂಖ್ಯೆ 1.3 ಮಿಲಿಯನ್ ದಾಟಿದೆ ಎಂದು ತಿಳಿಸಿದ್ದಾರೆ.

### ನೀಟ್ ಪರೀಕ್ಷೆ : ಹಗರಣಗಳ ಇತಿಹಾಸ

2013ರಲ್ಲಿ ದೇಶಾದ್ಯಂತ ಏಕರೂಪದ ವೈದ್ಯಕೀಯ ಪ್ರವೇಶ ಪರೀಕ್ಷೆಯಾಗಿ ನೀಟ್ ಪರಿಚಯಿಸಲಾಯಿತು. ನಂತರ ಸುಪ್ರೀಂ ಕೋರ್ಟ್ ಇದನ್ನು ಅಸಂವಿಧಾನಿಕ ಎಂದು ರದ್ದುಪಡಿಸಿದರೂ, 2016ರಲ್ಲಿ ತೀರ್ಪು ಮರುಪರಿಶೀಲಿಸಿ ಪರೀಕ್ಷೆಯನ್ನು ಮರುಸ್ಥಾಪಿಸಿತು.

ತಮಿಳುನಾಡಿನ ವೈದ್ಯಕೀಯ ವಿದ್ಯಾರ್ಥಿನಿ ಎಸ್. ಅನಿತಾ ಆತ್ಮಹತ್ಯೆ ಮಾಡಿಕೊಂಡ ಘಟನೆ ದೇಶಾದ್ಯಂತ ಭಾರೀ ಚರ್ಚೆಗೆ ಗ್ರಾಸವಾಗಿತ್ತು.

ತಮಿಳುನಾಡಿನಲ್ಲಿ ಪ್ರಾಕ್ಸಿ ಅಭ್ಯರ್ಥಿಗಳ ಮೂಲಕ ಪರೀಕ್ಷೆ ಬರೆಸುವ ದಂಧೆ ಬಯಲಾಯಿತು. 2020ರಲ್ಲಿ ಕೋವಿಡ್ ನಡುವೆಯೂ ಪರೀಕ್ಷೆ ನಡೆಸಲಾಗಿತ್ತು.

67 ಅಭ್ಯರ್ಥಿಗಳು 720ಕ್ಕೆ 720 ಅಂಕ ಪಡೆದ ಪ್ರಕರಣ, ಗ್ರೇಸ್ ಮಾರ್ಕ್ಸ್ ವಿವಾದ ಹಾಗೂ ಬಿಹಾರ ಸೇರಿದಂತೆ ಹಲವೆಡೆ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳು ಕೇಳಿಬಂದಿದ್ದವು. ಬಳಿಕ ಸಿಬಿಐ ತನಿಖೆ ನಡೆದಿತ್ತು.

ಗುಜರಾತ್‌ನ ಸಿಕಾರ್‌ನಲ್ಲಿ ಪರೀಕ್ಷೆಗೆ ಎರಡು ದಿನಗಳ ಮುನ್ನವೇ 180 ಪ್ರಶ್ನೆಗಳ ಪೈಕಿ 140 ಪ್ರಶ್ನೆಗಳು ಕೈಬರಹದ ಪ್ರತಿಯಲ್ಲಿ ಸೋರಿಕೆಯಾಗಿದ್ದವು ಎಂಬ ಆರೋಪ ಕೇಳಿ ಬಂದಿದೆ.

### 2026ರ ನೀಟ್ ಪರೀಕ್ಷೆಯ ಪ್ರಮುಖ ಅಂಶಗಳು

- ಪರೀಕ್ಷೆ ಬರೆದ ವಿದ್ಯಾರ್ಥಿಗಳು : 22.7 ಲಕ್ಷ+
- ಲಭ್ಯ ವೈದ್ಯಕೀಯ ಸೀಟುಗಳು : 1.29 ಲಕ್ಷ
- ಸರ್ಕಾರಿ ಕಾಲೇಜು ಸೀಟುಗಳು : 55,648
- ಖಾಸಗಿ ಕಾಲೇಜು ಸೀಟುಗಳು : 50,685
- ಪ್ರತೀ 1000 ಜನರಿಗೆ ವೈದ್ಯರು : 1.3
- ವಿದೇಶಕ್ಕೆ ತೆರಳುವ ಭಾರತೀಯ ವೈದ್ಯಕೀಯ ವಿದ್ಯಾರ್ಥಿಗಳು : ವರ್ಷಕ್ಕೆ 20-25 ಸಾವಿರ
- ಆರೋಗ್ಯ ಕ್ಷೇತ್ರಕ್ಕೆ ಕೇಂದ್ರ ವೆಚ್ಚ : ಜಿಡಿಪಿಯ 1.94%

## ಕೆನರಾ ಬ್ಯಾಂಕ್ ಸಿಬ್ಬಂದಿಗಳಿಗೆ ಸನ್ಮಾನ, ಬೀಳ್ಕೊಡುಗೆ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಬೆಳ್ಳಟ್ಟಿಯ ಕೆನರಾ ಬ್ಯಾಂಕ್ ಶಾಖೆಯಲ್ಲಿ 38 ವರ್ಷಗಳ ಕಾಲ ಪಿಗ್ಮಿ ಸಂಗ್ರಹಕಾರರಾಗಿ ಸೇವೆ ಸಲ್ಲಿಸಿದ ಶಿವಯೋಗಿ ವಿಭೂತಿ, ಶಾಖಾ ವ್ಯವಸ್ಥಾಪಕ ನರಸಿಂಹರಾಜ ಹಾಗೂ ಪದೋನ್ನತಿ ಹೊಂದಿದ ಶ್ರೀನಿವಾಸ ವೈಕುಂಠೆ ಅವರನ್ನು ಗ್ರಾಮಸ್ಥರು ಸನ್ಮಾನಿಸಿ ಬೀಳ್ಕೊಟ್ಟರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಬಿ.ಎಂ. ಯರಕದ, ಎಸ್.ವಿ. ಬಟ್ಟೂರ, ಕೆ.ಡಿ. ಕುಲಕರ್ಣಿ, ನವೀನಕುಮಾರ ಅಳವಂಡಿ, ಈಶ್ವರಪ್ಪ ಅಕ್ಕೂರ, ಅಶೋಕ ಹೊಸಮನಿ, ದೇವಪ್ಪ ಸಂಗಟಿ, ಮಂಜುನಾಥ ಅಂಗಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ಜ್ಞಾನಾರ್ಜನೆಗೆ ಪ್ರತಿಯೊಬ್ಬರೂ ಹೆಚ್ಚಿನ ಆದ್ಯತೆ ನೀಡಬೇಕು-ಕಲ್ಲಯ್ಯಜ್ಜನವರು**

## ಡಾ. ಅಂಬೇಡ್ಕರ್ ಧೀಮಂತ ನಾಯಕ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

"ಭಾರತಕ್ಕೆ ಅತ್ಯುತ್ತಮ ಸಂವಿಧಾನ ನೀಡಿದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಈ ನಾಡು ಕಂಡ ಧೀಮಂತ ನಾಯಕ" ಎಂದು ಗದಗದ ಶ್ರೀ ವೀರೇಶ್ವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಹೇಳಿದರು.



ಪಟ್ಟಣದ ಯುವ ಮುಖಂಡ ಮೈಲಾರಪ್ಪ ಚಳ್ಳಮರದ ಅವರ ನಿವಾಸದಲ್ಲಿ ಬುಧವಾರ ಪಾದಪೂಜೆ ಸ್ವೀಕರಿಸಿದ ಬಳಿಕ ಆಶೀರ್ವಚನ ನೀಡಿದ ಅವರು, ಡಾ. ಅಂಬೇಡ್ಕರ್ ಅವರ ಜೀವನ ಸಾಧನೆ ಕುರಿತು ಮಾತನಾಡಿದರು.

"ಡಾ. ಅಂಬೇಡ್ಕರ್ ಅವರು ಓದಿಗೆ ಸದಾ ಮೊದಲ ಆದ್ಯತೆ ನೀಡುತ್ತಿದ್ದರು. ಹಣ ಇದ್ದರೆ ಮೊದಲು ಪುಸ್ತಕಗಳನ್ನು ಖರೀದಿಸುತ್ತಿದ್ದರು. ಉಳಿದ ಹಣದಲ್ಲಿ ತಮ್ಮ ಊಟದ ಬಗ್ಗೆ ಯೋಚಿಸುತ್ತಿದ್ದರು. ಅವರಿಗೆ ಹೊಟ್ಟೆಯ ಹಸಿವಿಗಿಂತ ಜ್ಞಾನದ ಹಸಿವು ಹೆಚ್ಚಾಗಿತ್ತು. ಅವರ ನಿರಂತರ ಅಧ್ಯಯನವೇ ಅವರನ್ನು ಶ್ರೇಷ್ಠ ನಾಯಕನನ್ನಾಗಿ ರೂಪಿಸಿತು. ಮುಂದೆ ದೇಶದ ಸಂವಿಧಾನ ರಚಿಸುವ ಮಹತ್ತರ ಹೊಣೆಗಾರಿಕೆಯನ್ನು ನಿರ್ವಹಿಸುವ ಮಟ್ಟಕ್ಕೆ ಕೊಂಡೊಯ್ದಿತು" ಎಂದು ಹೇಳಿದರು.

ಪ್ರತಿಯೊಬ್ಬರೂ ಜ್ಞಾನಾರ್ಜನೆಗೆ ಹೆಚ್ಚಿನ ಗಮನ ನೀಡಬೇಕು ಎಂದು ಅವರು ಸಲಹೆ ನೀಡಿದರು.

ಮೇ 16ರಂದು ನರೇಗಲ್ಲದಲ್ಲಿ ರಾಜ್ಯಮಟ್ಟದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಂ ಅವರ ಜಯಂತ್ಯೋತ್ಸವ ಆಚರಣೆಗೆ ಸಕಲ ಸಿದ್ಧತೆ ನಡೆಸಿರುವ ಮೈಲಾರಪ್ಪ ಚಳ್ಳಮರದ ಹಾಗೂ ಅಭಿಮಾನಿಗಳಿಗೆ ಶುಭ ಕೋರಿದ ಅವರು, ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಚಳ್ಳಮರದ ದಂಪತಿಗಳು ಶ್ರೀ ಕಲ್ಲಯ್ಯಜ್ಜನವರನ್ನು ಸನ್ಮಾನಿಸಿ ಗೌರವಿಸಿದರು.

**ವಿಯೆಟ್ನಾಂನಲ್ಲಿ ನಡೆಯುವ ವೈಜ್ಞಾನಿಕ ಸಮಾವೇಶದಲ್ಲಿ ಫೆಲೋಶಿಪ್ ಪ್ರದಾನ**

## ಸುಧಾ ಹುಚ್ಚಣ್ಣವರಿಗೆ ಅಂತರಾಷ್ಟ್ರೀಯ ಮಟ್ಟದ ಗೌರವ

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ಪಟ್ಟಣದ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕಿ ಹಾಗೂ ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಸುಧಾ ಹುಚ್ಚಣ್ಣವರ ಅವರಿಗೆ ಕರ್ನಾಟಕ ರಾಜ್ಯ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ವತಿಯಿಂದ "ಇಂಡೋ-ನಾಮ್ ಸೈಂಟಿಫಿಕ್ ಸಮಿಟ್-2026 ಫೆಲೋಶಿಪ್" ಪ್ರಧಾನ ಮಾಡಲಾಗುತ್ತಿದೆ.

ವಿಯೆಟ್ನಾಂ ದೇಶದ ಡನಾಂಗ್ ನಗರದಲ್ಲಿ ಮೇ 22ರಂದು ನಡೆಯಲಿರುವ ಅಂತರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನದಲ್ಲಿ ಈ ಫೆಲೋಶಿಪ್ ಪ್ರದಾನ ಮಾಡಲಾಗುವುದು ಎಂದು ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಹುಲಿಕಲ್ ನಟರಾಜ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 17ರಿಂದ 22ರವರೆಗೆ ಕರ್ನಾಟಕ ರಾಜ್ಯ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ತಿನ 70 ಸದಸ್ಯರ ತಂಡ ವಿಯೆಟ್ನಾಂ ದೇಶಕ್ಕೆ ವೈಜ್ಞಾನಿಕ, ಶೈಕ್ಷಣಿಕ ಹಾಗೂ ಸಂಶೋಧನಾ ಅಧ್ಯಯನ ಪ್ರವಾಸ ಕೈಗೊಂಡಿದ್ದು, ಅಲ್ಲಿ ಪರಿಷತ್ ವತಿಯಿಂದ ಅಂತರಾಷ್ಟ್ರೀಯ ವೈಜ್ಞಾನಿಕ ಸಮ್ಮೇಳನ ಆಯೋಜಿಸಲಾಗಿದೆ.

ಈ ಸಮ್ಮೇಳನದಲ್ಲಿ ಗದಗ ಜಿಲ್ಲೆಯಿಂದ ಫೆಲೋಶಿಪ್‌ಗೆ ಆಯ್ಕೆಯಾಗಿರುವ ಸುಧಾ ಹುಚ್ಚಣ್ಣವರ ಅವರು ವೃತ್ತಿಯಿಂದ ಉಪನ್ಯಾಸಕಿ ಹಾಗೂ ಪ್ರವೃತ್ತಿಯಿಂದ ಕ್ರಿಯಾಶೀಲ ಬರಹಗಾರ್ತಿಯಾಗಿದ್ದಾರೆ. ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಹಿತ್ಯಿಕ ಸಂಘಟಕರಾಗಿ ಗದಗ ಜಿಲ್ಲೆಯಲ್ಲಿ ಚಿರಪರಿಚಿತರಾಗಿದ್ದಾರೆ.

ಇದಲ್ಲದೆ, ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಶಿಕ್ಷಣ ಶಾಸ್ತ್ರ ವಿಷಯದಲ್ಲಿ ಸಂಶೋಧನೆ ಕೈಗೊಂಡಿದ್ದಾರೆ.

ಇವರ ಸಾಧನೆಗೆ ಗದಗ ಜಿಲ್ಲೆಯ ವಿವಿಧ ಸಂಘಟನೆಗಳು ಹಾಗೂ ಶರಣ ಬಂಧುಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

**ಅಂತರ್ಜಲ ವೃದ್ಧಿಯ ಜತೆಗೆ ಗ್ರಾಮೀಣರಿಗೆ ಉದ್ಯೋಗ ಖಾತ್ರಿ- ದಿನಕ್ಕೆ 370 ಸಮಾನ ಕೂಲಿ**

## ಕಂದಕ ಬದು ನಿರ್ಮಾಣ ಚುರುಕು

■ **ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಗದಗ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಂದಕ ಬದು ನಿರ್ಮಾಣ ಕಾಮಗಾರಿಗಳು ಚುರುಕುಗೊಂಡಿದ್ದು, ಮಣ್ಣು ಮತ್ತು ನೀರು ಸಂರಕ್ಷಣೆಯ ಜತೆಗೆ ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸುವಲ್ಲಿ ಯೋಜನೆ ಮಹತ್ವದ ಪಾತ್ರವಹಿಸುತ್ತಿದೆ.

ತಾಲೂಕು ಪಂಚಾಯಿತಿ ವ್ಯಾಪ್ತಿಯ ಚಿಕ್ಕಹಂದಿಗೋಳ, ಅಡವಿಸೋಮಾಪುರ, ಬಿಂಕದಕಟ್ಟಿ, ಲಕ್ಕುಂಡಿ, ಬೆಳಹೋಡ, ತಿಮ್ಮಾಪುರ, ಹುಯಿಲಗೋಳ, ಬೆಳದಡಿ, ಹರ್ತಿ, ನೀರಲಗಿ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಸಮುದಾಯ ಕಾಮಗಾರಿಗಳು ಆರಂಭವಾಗಿದ್ದು, ಪ್ರತಿದಿನ ಸಾವಿರಕ್ಕೂ ಹೆಚ್ಚು ಜನರು ಕೆಲಸದಲ್ಲಿ ತೊಡಗಿದ್ದಾರೆ.

ಕಂದಕ ಬದು ನಿರ್ಮಾಣದಿಂದ ಮಳೆಯ ನೀರು ಜಮೀನಿನಲ್ಲಿಯೇ ಸಂಗ್ರಹವಾಗುವುದರ ಜೊತೆಗೆ ಫಲವತ್ತಾದ ಮಣ್ಣು ಕೊಚ್ಚಿಹೋಗುವುದನ್ನು ತಡೆಯಲಾಗುತ್ತಿದೆ. ಇದರಿಂದ ಅಂತರ್ಜಲ ಪ್ರಮಾಣ ಹೆಚ್ಚಳವಾಗಲಿದ್ದು, ರೈತರಿಗೆ ದೀರ್ಘಕಾಲಿಕವಾಗಿ ಅನುಕೂಲವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಉದ್ಯೋಗ ಖಾತ್ರಿ ಯೋಜನೆಯಲ್ಲಿ ಪಾರದರ್ಶಕತೆ ತರಲು ಕೇಂದ್ರ ಸರ್ಕಾರ ಅಭಿವೃದ್ಧಿಪಡಿಸಿರುವ ರಾಷ್ಟ್ರೀಯ ಮೊಬೈಲ್ ಮಾನಿಟರಿಂಗ್ ವ್ಯವಸ್ಥೆ ತಂತ್ರಾಂಶದ ಮೂಲಕ ದಿನಕ್ಕೆ ಎರಡು ಬಾರಿ ಹಾಜರಾತಿ ಕಡ್ಡಾಯಗೊಳಿಸಲಾಗಿದೆ. ಮುಖಚಹರೆ ಆಧಾರಿತ ಹಾಜರಾತಿಯನ್ನು ದಾಖಲಿಸಿ ಕೂಲಿಕಾರರ ಮಾಹಿತಿಯನ್ನು ತಂತ್ರಾಂಶದಲ್ಲಿ ದಾಖಲಿಸಲಾಗುತ್ತಿದೆ.

> "ಮಣ್ಣು ಉಳಿದರೆ ಮಾತ್ರ ಕೃಷಿ ಉಳಿಯುತ್ತದೆ; ನೀರು ಉಳಿದರೆ ಮಾತ್ರ ಗ್ರಾಮೀಣ ಬದುಕು ನೆಮ್ಮದಿಯಾಗುತ್ತದೆ."



> "ಬದು ನಿರ್ಮಾಣದಿಂದ ಮಣ್ಣು ಮತ್ತು ನೀರು ಸಂರಕ್ಷಣೆ ಸಾಧ್ಯವಾಗುತ್ತದೆ. ಇದರಿಂದ ಜಮೀನಿನ ಫಲವತ್ತತೆ ಹೆಚ್ಚುವುದರ ಜೊತೆಗೆ ಸಣ್ಣ ಹಾಗೂ ಅತಿಸಣ್ಣ ರೈತರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ದಿನಕ್ಕೆ 370 ಕೂಲಿ ದೊರೆಯುತ್ತಿದೆ."
>
> – **ಡಾ. ಎಚ್.ಎಸ್. ಜಿನಗಾ, ಕಾರ್ಯನಿರ್ವಾಹಕ ಅಧಿಕಾರಿ, ತಾಪಂ ಗದಗ**

ಯೋಜನೆಯಡಿ ಮಹಿಳೆ-ಪುರುಷ ಎಂಬ ಭೇದವಿಲ್ಲದೆ ಪ್ರತಿಯೊಬ್ಬರಿಗೂ ದಿನಕ್ಕೆ 370 ಸಮಾನ ಕೂಲಿ ನೀಡಲಾಗುತ್ತಿದೆ. ನಿಗದಿತ ಅಳತೆಗೆ ಅನುಗುಣವಾಗಿ ಕೆಲಸ ಪೂರ್ಣಗೊಳಿಸಿದವರಿಗೆ ಮಾತ್ರ ಪೂರ್ಣ ಪ್ರಮಾಣದ ಕೂಲಿ ದೊರೆಯಲಿದೆ. ಕೂಲಿ ಹಣವನ್ನು ನೇರವಾಗಿ ಕಾರ್ಮಿಕರ ಉಳಿತಾಯ ಖಾತೆಗೆ ಜಮೆ ಮಾಡಲಾಗುತ್ತದೆ.

ಕುಟುಂಬದ ಸದಸ್ಯರು ಒಟ್ಟಾಗಿ ಕೆಲಸ ನಿರ್ವಹಿಸಿ ಆದಾಯ ಗಳಿಸಬಹುದಾಗಿದ್ದು, ಮಕ್ಕಳ ಶಿಕ್ಷಣ, ಗೊಬ್ಬರ-ಬೀಜ ಖರೀದಿ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ಈ ಹಣ ನೆರವಾಗುತ್ತಿದೆ.

> "ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಬದು ನಿರ್ಮಾಣ ಹಾಗೂ ಹಳ್ಳ ಹೂಳೆತ್ತುವ ಕಾಮಗಾರಿಗಳು ಆರಂಭಗೊಂಡಿವೆ. ನಿಗದಿತ ಅಳತೆಗೆ ಅನುಗುಣವಾಗಿ ಕೆಲಸ ಮಾಡಿದವರಿಗೆ ಮಾತ್ರ ಯೋಜನೆಯಡಿ ಸಮಾನ ಕೂಲಿ ಪಾವತಿಸಲಾಗುತ್ತಿದೆ."
>
> – **ಕುಮಾರ ಪೂಜಾರ, ಸಹಾಯಕ** ನಿರ್ದೇಶಕರು (ಉದ್ಯೋಗ ಖಾತ್ರಿ), ತಾಪಂ ಗದಗ

### ಉದ್ಯೋಗ ಖಾತ್ರಿ ಯೋಜನೆಯ ಪ್ರಮುಖ ಅಂಶಗಳು

1. ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಂದಕ ಬದು ನಿರ್ಮಾಣ ಕಾಮಗಾರಿ
2. ಪ್ರತಿದಿನ ಸಾವಿರಕ್ಕೂ ಹೆಚ್ಚು ಕಾರ್ಮಿಕರಿಗೆ ಉದ್ಯೋಗ
3. ಮಹಿಳೆ-ಪುರುಷರಿಗೆ ಸಮಾನವಾಗಿ 370 ಕೂಲಿ
4. ದಿನಕ್ಕೆ ಎರಡು ಬಾರಿ ಡಿಜಿಟಲ್ ಹಾಜರಾತಿ ಕಡ್ಡಾಯ
5. ಕಂದಕ ನಿರ್ಮಾಣದಿಂದ ಅಂತರ್ಜಲ ವೃದ್ಧಿಗೆ ನೆರವು
6. ಫಲವತ್ತಾದ ಮಣ್ಣು ಜಮೀನಿನಲ್ಲಿಯೇ ಉಳಿವು
7. ಗ್ರಾಮೀಣ ವಲಸೆ ತಡೆಗೆ ಯೋಜನೆ ಸಹಕಾರಿ

10 ಅಡಿ ಉದ್ದ, 5 ಅಡಿ ಅಗಲ ಹಾಗೂ 2 ಅಡಿ ಆಳದ ಕಂದಕ ನಿರ್ಮಾಣಕ್ಕೆ ಅವಕಾಶವಿದ್ದು, ಪ್ರತಿ ಕಂದಕವು ಅಂದಾಜು 2700 ಲೀಟರ್ ನೀರು ಹಿಡಿದಿಡುವ ಸಾಮರ್ಥ್ಯ ಹೊಂದಿದೆ. ಇದರಿಂದ ಮಳೆ ನೀರು ಹರಿದುಹೋಗದೆ ಜಮೀನಿನಲ್ಲೇ ಉಳಿಯಲಿದ್ದು, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಪೂರಕವಾಗಲಿದೆ.

ಗ್ರಾಮೀಣ ಜನರಿಗೆ ತಮ್ಮ ಊರಲ್ಲಿಯೇ ಉದ್ಯೋಗ ಒದಗಿಸುವ ಉದ್ದೇಶದಿಂದ ಸಮುದಾಯ ಬದು ನಿರ್ಮಾಣ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ. ಇದರಿಂದ ವಲಸೆ ತಡೆದು ಗ್ರಾಮೀಣರಿಗೆ ಸ್ಥಳೀಯ ಮಟ್ಟದಲ್ಲಿಯೇ ಉದ್ಯೋಗ ಸಿಗುತ್ತಿದೆ.

### ಸರ್ಕಾರದ ನಿರ್ಧಾರ ಸಂವಿಧಾನದ ಆಶಯಕ್ಕೆ ಪೂರಕ : ಮಹ್ಮದಶಫಿ ನಾಗರಕಟ್ಟಿ

# ಹಿಜಾಬ್ ಧಾರ್ಮಿಕ ಸ್ವಾತಂತ್ರ್ಯದ ಸಂಕೇತ

■ವಿಜಯಸಾಕ್ಷಿ ಸುದ್ದಿ, ಗದಗ



"ಶಾಲಾ-ಕಾಲೇಜುಗಳಲ್ಲಿ ಸಮವಸ್ತ್ರದ ಜೊತೆಗೆ ಹಿಜಾಬ್ ಹಾಗೂ ಇತರ ಧಾರ್ಮಿಕ ಚಿಹ್ನೆಗಳನ್ನು ಧರಿಸಲು ಅವಕಾಶ ನೀಡಿರುವುದು ಕೇವಲ ಒಂದು ಸಮುದಾಯದ ಬೇಡಿಕೆಯಲ್ಲ. ಅದು ಭಾರತೀಯ ಸಂವಿಧಾನ ಪ್ರಜೆಗಳಿಗೆ ನೀಡಿದ ಧಾರ್ಮಿಕ ಸ್ವಾತಂತ್ರ್ಯ ಮತ್ತು ಸಾಂಸ್ಕೃತಿಕ ಪರಂಪರೆಗೆ ಸಂದ ಗೌರವವಾಗಿದೆ" ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹಮ್ಮದ್ ಶಫಿ ನಾಗರಕಟ್ಟಿ ಹೇಳಿದ್ದಾರೆ.

ನಗರದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರದ ಈ ನಡೆ ಸಂವಿಧಾನಾತ್ಮಕ ಹಕ್ಕುಗಳ ರಕ್ಷಣೆಯಾಗಿದೆ ಎಂದು ಅಭಿಪ್ರಾಯಪಟ್ಟರು. ಭಾರತೀಯ ಸಂವಿಧಾನದ ಅನುಚ್ಛೇದ 25 ಪ್ರತಿ ಪ್ರಜೆಗೆ ತನ್ನ ಧರ್ಮವನ್ನು ಮುಕ್ತವಾಗಿ ಪಾಲಿಸುವ ಮತ್ತು ಪ್ರಚಾರ ಮಾಡುವ ಹಕ್ಕು ನೀಡಿದೆ. ಸಮವಸ್ತ್ರದ ಘನತೆಗೆ ಧಕ್ಕೆಯಾಗದಂತೆ ಧಾರ್ಮಿಕ ಸಂಕೇತಗಳನ್ನು ಧರಿಸುವುದು ಸಂವಿಧಾನದ ಆಶಯಗಳಿಗೆ ಪೂರಕವಾಗಿದೆ. ಇದು ವ್ಯಕ್ತಿ ಸ್ವಾತಂತ್ರ್ಯ ಮತ್ತು ಶೈಕ್ಷಣಿಕ ಸಮಾನತೆಯನ್ನು ಎತ್ತಿ ಹಿಡಿಯುವ ನಿರ್ಧಾರ ಎಂದು ಹೇಳಿದರು.

ಹಿಜಾಬ್ ಕೇವಲ ಧಾರ್ಮಿಕ ಸಂಕೇತವಲ್ಲ, ಅದು ಸಾಂಸ್ಕೃತಿಕ ಗೌರವದ ಪ್ರತೀಕವಾಗಿದೆ. ಭಾರತೀಯ ಸಂಸ್ಕೃತಿಯಲ್ಲಿ ಹಿರಿಯರಿಗೆ ಗೌರವ ಸೂಚಿಸುವಾಗ ಅಥವಾ ದೇವರ ಸನ್ನಿಧಿಯಲ್ಲಿ ತಲೆಯ ಮೇಲೆ ಸೆರಗು ಹೊದಿಯುವ ಪದ್ಧತಿ ಪ್ರಾಚೀನ ಕಾಲದಿಂದಲೂ ನಡೆದುಕೊಂಡು ಬಂದಿದೆ ಎಂದು ತಿಳಿಸಿದರು.

ತೀವ್ರ ಬಿಸಿಲು, ಧೂಳು ಹಾಗೂ ಸಾಂಕ್ರಾಮಿಕ ರೋಗಗಳ ಸಂದರ್ಭಗಳಲ್ಲಿ ಮುಖ ಮತ್ತು ತಲೆಯನ್ನು ಬಟ್ಟೆಯಿಂದ ಮುಚ್ಚಿಕೊಳ್ಳುವುದು ಸಾಮಾನ್ಯ ಅಭ್ಯಾಸವಾಗಿದೆ. ಶಾಲಾ ಸಮವಸ್ತ್ರದ ಭಾಗವಾಗಿರುವ ಓಡ್ನಿಯನ್ನು ಶಿಸ್ತಿನಿಂದ ತಲೆಯ ಮೇಲೆ ಧರಿಸುವುದೇ ಹಿಜಾಬ್ ಆಗಿದ್ದು, ಇದರಿಂದ ಸಮವಸ್ತ್ರದ ಬಣ್ಣ ಅಥವಾ ಶಿಸ್ತಿಗೆ ಯಾವುದೇ ಧಕ್ಕೆಯಾಗುವುದಿಲ್ಲ ಎಂದು ಹೇಳಿದರು. ಭಾರತ ವಿವಿಧತೆಯಲ್ಲಿ ಏಕತೆಯನ್ನು ಕಂಡ ದೇಶವಾಗಿದ್ದು, ಎಲ್ಲ ಧರ್ಮಗಳ ಭಾವನೆಗಳನ್ನು ಗೌರವಿಸುವುದು ಹಾಗೂ ಪರಸ್ಪರ ಸಹಬಾಳ್ವೆಯಿಂದ ಬದುಕುವುದು ಇಂದಿನ ಅಗತ್ಯವಾಗಿದೆ. ಸರ್ಕಾರದ ಈ ನಿರ್ಧಾರವು ಭಾವೈಕ್ಯತೆಯ ಸಂದೇಶ ಸಾರಲಿದ್ದು, ವಿದ್ಯಾರ್ಥಿಗಳಲ್ಲಿ ತಾರತಮ್ಯ ನಿವಾರಿಸಿ "ಸಮಪಾಲು-ಸಮಬಾಳು" ತತ್ವಕ್ಕೆ ಬಲ ತುಂಬಲಿದೆ ಎಂದು ಮಹಾಸಭಾ ಆಶಿಸಿದೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜಾಫರ್ ಡಾಲಾಯತ್, ನಗರ ಅಧ್ಯಕ್ಷ ತಾಜುದ್ದೀನ್ ಪಾಪ್ಪಣ್ಣವರ, ನಗರ ಉಪಾಧ್ಯಕ್ಷ ಕುತುಬುದ್ದೀನ್ ಶೇಖ್, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹಮದ್ ದೊಡ್ಡಮನಿ, ಮೆಹಬೂಬ ಬಾದಷಾ ಖಾಜಿ, ರಫೀಕ್ ಈಟಿ, ಮುನ್ನಾ ಇರಕಲ್, ಮುನ್ನ ಕಲ್ಮನಿ, ರಹಿಂಸಾಬ್ ದೊಡ್ಡಮನಿ, ನಿಜಾಮುದ್ದೀನ್ ಕಾಟಪುರ್, ರಾಜೇಶ್ ಸಾಬ್ ತಡಶ, ನೂರ್ ಅಲಿ ಧಾರವಾಡ ಹಾಗೂ ಆಸಿಫ್ ನರಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಸಮವಸ್ತ್ರದ ಜೊತೆಗೆ ಹಿಜಾಬ್ ಧರಿಸಲು ಅವಕಾಶ ನೀಡಿರುವುದು ಸಂವಿಧಾನಾತ್ಮಕ ಹಕ್ಕುಗಳ ರಕ್ಷಣೆಯಾಗಿದೆ. ಇದು ಧಾರ್ಮಿಕ ಸ್ವಾತಂತ್ರ್ಯ ಹಾಗೂ ಸಾಂಸ್ಕೃತಿಕ ಗೌರವವನ್ನು ಎತ್ತಿ ಹಿಡಿಯುವ ನಿರ್ಧಾರ."
> **– ಮಹ್ಮದಶಫಿ ನಾಗರಕಟ್ಟಿ,** ರಾಜ್ಯಾಧ್ಯಕ್ಷರು, ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ.

# 'ಡ್ರಗ್ಸ್ ಮಾಫಿಯಾಗೆ ಲಾಡ್ ಲಾಠಿ'

▶▶ ಮೊದಲನೇ ಪುಟದಿಂದ

ಧಾರವಾಡ ಜಿಲ್ಲೆಯನ್ನು ಶೀಘ್ರದಲ್ಲೇ ಡ್ರಗ್ಸ್, ಗಾಂಜಾ ಹಾಗೂ ಅಪರಾಧಮುಕ್ತ ಜಿಲ್ಲೆಯನ್ನಾಗಿ ರೂಪಿಸಲು ತಾವು ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು ಹಾಗೂ ಜನಪ್ರತಿನಿಧಿಗಳ ಸಂಪೂರ್ಣ ಸಹಕಾರ ಇರುತ್ತದೆ ಎಂದು ಸಚಿವ ಸಂತೋಷ ಲಾಡ್ ಭರವಸೆ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪ ಪೊಲೀಸ್ ಆಯುಕ್ತರಾದ ರವೀಶ್ ಸಿ.ಆರ್. ಹಾಗೂ ಶೃತಿ ಎನ್.ಎಸ್. ಮಾತನಾಡಿದರು.

ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಸೇರಿದಂತೆ ನಾಗರಿಕ ಪೊಲೀಸ್, ಸೈಬರ್ ಕ್ರೈಂ, ಅಬಕಾರಿ ಪೊಲೀಸ್, ಸಂಚಾರಿ ಪೊಲೀಸ್, ಎನ್‌ಕಾರ್ಡ್ ಪೊಲೀಸ್ ಹಾಗೂ ರೈಲ್ವೆ ಪೊಲೀಸ್ ಇಲಾಖೆಗಳ ವಿವಿಧ ಹಂತದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

### 'ಎರಡು ಬಾರಿ ಹಾಜರಾತಿ ಕಡ್ಡಾಯ; ಅಳತೆಗೆ ತಕ್ಕ ಕೆಲಸ ಮಾಡಿದರೆ ಮಾತ್ರ ₹370 ಕೂಲಿ'

# 'ನರೇಗಾ ಕೂಲಿಕಾರರಿಗೆ ಖಡಕ್ ಸೂಚನೆ'

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸೂರಣಗಿ ಗ್ರಾಮ ಪಂಚಾಯಿತಿಯಲ್ಲಿ ಆರಂಭಗೊಂಡಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ ಹಾಗೂ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ನರೇಗಾ ಕೂಲಿ ಕಾರ್ಮಿಕರೊಂದಿಗೆ ಚರ್ಚೆ ನಡೆಸಿದ ಅಧಿಕಾರಿಗಳು, ಕಾಮಗಾರಿಯ ಪ್ರಗತಿ, ಹಾಜರಾತಿ ಹಾಗೂ ಕೂಲಿ ಪಾವತಿ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಇಓ ಮಂಜುಳಾ ಹಕಾರಿ, ನರೇಗಾ ಯೋಜನೆಯಡಿ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಆರಂಭಗೊಂಡಿದ್ದು, ಕೂಲಿ ಕಾರ್ಮಿಕರು ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ನೀಡಬೇಕು. ಅಳತೆಗೆ ತಕ್ಕಂತೆ ಕೆಲಸ ನಿರ್ವಹಿಸಿದರೆ ಮಾತ್ರ ಕೂಲಿ ಪಾವತಿಯಾಗುತ್ತದೆ ಎಂದು ತಿಳಿಸಿದರು.

"ಕೂಲಿಕಾರರು ಎರಡು ಬಾರಿ ಹಾಜರಾತಿ ಹಾಕಿಸದಿದ್ದರೆ ಕೂಲಿ ಹಣ ಜಮೆಯಾಗುವುದಿಲ್ಲ. ಎಲ್ಲರೂ ನಿಯಮಾನುಸಾರ ಕೆಲಸ ನಿರ್ವಹಿಸಿದರೆ ಪ್ರತಿಯೊಬ್ಬರಿಗೂ ₹370 ಕೂಲಿ ದೊರೆಯಲಿದೆ" ಎಂದು ಹೇಳಿದರು.



ತಾಲೂಕು ಪಂಚಾಯಿತಿಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಮಾತನಾಡಿ, ಕೂಲಿ ಕಾರ್ಮಿಕರು ಆರೋಗ್ಯದ ಕಡೆ ಗಮನಹರಿಸಬೇಕು. ಮುಂಜಾನೆ ಬೇಗ ಕೆಲಸಕ್ಕೆ ಬಂದು ಅಳತೆಗೆ ತಕ್ಕಂತೆ ಕೆಲಸ ಮುಗಿಸಿ, ಎರಡು ಬಾರಿ ಹಾಜರಾತಿ ನೀಡಿದರೆ ₹370 ಕೂಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆಯಾಗುತ್ತದೆ ಎಂದು ತಿಳಿಸಿದರು.

ಅಲ್ಲದೆ ಸಾಮಾಜಿಕ ಭದ್ರತಾ ಯೋಜನೆ, ವಿಮಾ ಯೋಜನೆ ಹಾಗೂ ನರೇಗಾ ಯೋಜನೆಯ ವಿವಿಧ ಸೌಲಭ್ಯಗಳ ಕುರಿತು ಕೂಲಿ ಕಾರ್ಮಿಕರಿಗೆ ಮಾಹಿತಿ ನೀಡಿದರು.

> "ನರೇಗಾ ಯೋಜನೆಯಡಿ ದೊರೆಯುವ ಕೂಲಿ ಹಣವನ್ನು ಕೃಷಿ ಚಟುವಟಿಕೆಗಳು ಹಾಗೂ ಮಕ್ಕಳ ಶಿಕ್ಷಣದ ಅಗತ್ಯಗಳಿಗೆ ಬಳಸಿಕೊಳ್ಳಬೇಕು. ಇದು ನಿಮ್ಮ ಶ್ರಮದ ಹಣ, ಅದನ್ನು ಉಳಿಸಿಕೊಂಡು ಸದ್ವಿನಿಯೋಗ ಮಾಡಿಕೊಳ್ಳಿ."
> **– ಮಂಜುಳಾ ಹಕಾರಿ,** ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ. ಲಕ್ಷ್ಮೇಶ್ವರ

> "2026-27ನೇ ಸಾಲಿನ ಕ್ರಿಯಾಯೋಜನೆ ಅನುಮೋದನೆಯ ನಂತರ ಹಾಗೂ ಮುಂಗಾರು ಮಳೆ ಆರಂಭವಾಗಿ ಕೃಷಿ ಚಟುವಟಿಕೆಗಳು ಶುರುವಾಗುವವರೆಗೂ ನರೇಗಾ ಅಡಿಯಲ್ಲಿ ಕೆಲಸ ನೀಡಲಾಗುವುದು. ಗ್ರಾಮೀಣ ಭಾಗದ ಕೂಲಿ ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು."
> **– ಕೃಷ್ಣಪ್ಪ ಧರ್ಮರ,** ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾ.ಪಂ. ಲಕ್ಷ್ಮೇಶ್ವರ

ಕಾಯಕ ಬಂಧುಗಳು ಕೂಲಿಕಾರರಿಗೆ ನೆರಳು, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಕಾರ್ಮಿಕರ ಹಾಜರಾತಿ ಕಡ್ಡಾಯವಾಗಿ ನಿರ್ವಹಿಸಬೇಕು ಎಂದು ಮಾರ್ಗದರ್ಶನ ನೀಡಿದರು.

ಈ ವೇಳೆ ಸೂರಣಗಿ ಗ್ರಾಮ ಪಂಚಾಯಿತಿ ಪಿಡಿಓ ಜಿ.ಎಂ. ರೋಣದ, ಟಿಐಇಸಿ ಮಂಜುನಾಥಸ್ವಾಮಿ ಹೆಚ್.ಎಂ., ಟಿಎಂಐಎಸ್ ಚಂದ್ರಶೇಖರ ಹಳ್ಳಿ, ತಾಂತ್ರಿಕ ಸಹಾಯಕ ಫಕೀರೇಶ ನಿಟ್ಟಾಲಿ, ಬಿಎಫ್‌ಟಿ ಕಾಸಿಂಸಾಬ್ ನದಾಫ್, ಡಿಇಓ ಗುಡ್ಡದಪ್ಪ ಕಮತ, ಕಾಯಕ ಬಂಧುಗಳು ಹಾಗೂ 450ಕ್ಕೂ ಹೆಚ್ಚು ನರೇಗಾ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

### ಡಜನ್‌ಗೆ 150ರಿಂದ 250ಕ್ಕೆ ಮಾರಾಟ – ಇನ್ನೆರಡು ದಿನಗಳಲ್ಲಿ ಮತ್ತಷ್ಟು ದರ ಇಳಿಕೆ ಸಾಧ್ಯತೆ

# ಮಾರುಕಟ್ಟೆಯಲ್ಲಿ ಮಾವಿನಹಣ್ಣಿನ ಘಮಘಮ!

■ವಿಜಯಸಾಕ್ಷಿ ಸುದ್ದಿ, ಡಂಬಳ

ಮಾರುಕಟ್ಟೆಗೆ ಸ್ಥಳೀಯ ಮಾವಿನಹಣ್ಣುಗಳ ಜೊತೆಗೆ ಆಂಧ್ರಪ್ರದೇಶ ಹಾಗೂ ಮಹಾರಾಷ್ಟ್ರ ರಾಜ್ಯಗಳ ವಿವಿಧ ತಳಿಯ ಮಾವುಗಳು ಲಗ್ಗೆ ಇಟ್ಟಿದ್ದು, ಗದಗ ನಗರ, ಡಂಬಳ ಹೋಬಳಿ ಗ್ರಾಮೀಣ ಪ್ರದೇಶ ಸೇರಿದಂತೆ ರಾಜ್ಯದ ವಿವಿಧ ಪಟ್ಟಣ ಹಾಗೂ ನಗರಗಳ ಮಾರುಕಟ್ಟೆಗಳಲ್ಲಿ ಮಾವಿನ ಹಣ್ಣಿನ ವ್ಯಾಪಾರ ಜೋರಾಗಿದೆ. ಜೂನ್ ತಿಂಗಳವರೆಗೆ ವಿವಿಧ ತಳಿಯ ಮಾವಿನಹಣ್ಣುಗಳು ಮಾರುಕಟ್ಟೆಯಲ್ಲಿ ಲಭ್ಯವಾಗಲಿವೆ.

ಸ್ಥಳೀಯ ಮಾವುಗಳ ಜೊತೆ-ಗೆ ಮಹಾರಾಷ್ಟ್ರದ ಕೊಲ್ಹಾಪುರ ಭಾಗದ ಮಾವಿನಹಣ್ಣುಗಳು ಗದಗ ನಗರ ಹಾಗೂ ಡಂಬಳ ಹೋಬಳಿ ಗ್ರಾಮೀಣ ಪ್ರದೇಶದ ಮಾರುಕಟ್ಟೆಗಳಲ್ಲಿ ಗ್ರಾಹಕರನ್ನು ಆಕರ್ಷಿಸುತ್ತಿವೆ. ವಿಶೇಷವಾಗಿ ರತ್ನಾಗಿರಿ ಆಪೋಸ್, ಹುಲಕೋಟಿ ಆಪೋಸ್ ಹಾಗೂ ಮುಂಡರಗಿ ತಾಲೂಕಿನ ಡಂಬಳ ಹೋಬಳಿ ಗ್ರಾಮೀಣ ಭಾಗದಲ್ಲಿ ಬೆಳೆಯುವ ನಾಟಿ ಮಾವು ಮತ್ತು ಆಪೋಸ್ ಮಾವುಗಳು ಎಲ್ಲೆಡೆ ಪ್ರಸಿದ್ಧಿ ಪಡೆದಿವೆ.

ಆಪೋಸ್ ಸೇರಿದಂತೆ ವಿವಿಧ ತಳಿಯ ಮಾವಿನಹಣ್ಣುಗಳ ಬೆಲೆ ಕಳೆದ ಎರಡು ದಿನಗಳಲ್ಲಿ ದಿಢೀರ್ ಇಳಿಕೆಯಾಗಿದೆ. ಮಂಗಳವಾರ ಚಿಲ್ಲರೆ ಮಾರುಕಟ್ಟೆಯಲ್ಲಿ ಸಣ್ಣ ಗಾತ್ರದ ಮಾವಿನಹಣ್ಣುಗಳು ಡಜನ್‌ಗೆ 150ರಿಂದ 200ಕ್ಕೆ ಹಾಗೂ ದೊಡ್ಡ ಹಣ್ಣುಗಳು 250ರವರೆಗೆ ಮಾರಾಟವಾದವು.

> "ಮುಂಡರಗಿ ಭಾಗ ಸೇರಿದಂತೆ ರಾಜ್ಯದ ಹಲವೆಡೆ ಈ ಬಾರಿ ಮಾವು ಬೆಳೆಗೆ ಉತ್ತಮ ವಾತಾವರಣ ಸಿಕ್ಕಿರುವುದರಿಂದ ಉತ್ತಮ ಇಳುವರಿ ನಿರೀಕ್ಷೆಯಿದೆ."
> **– ಮಹಮ್ಮದ್ ರಫೀಕ್ ತಾಂಬೋಟಿ, ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರು, ಮುಂಡರಗಿ**





### ಕೃತಕವಾಗಿ ಹಣ್ಣಾಗಿಸುವ ಹಣ್ಣುಗಳ ಬಗ್ಗೆ ಎಚ್ಚರಿಕೆ

ಕೆಲವು ವ್ಯಾಪಾರಸ್ಥರು ಕ್ಯಾಲ್ಸಿಯಂ ಕಾರ್ಬೈಡ್ ದ್ರಾವಣ ಬಳಸಿ ಕಾಯಿ ಹಣ್ಣಾಗಿಸುವ ಕೆಲಸ ಮಾಡುತ್ತಿದ್ದಾರೆ. ಈ ವಿಧಾನದಲ್ಲಿ ಎರಡು ದಿನಗಳಲ್ಲೇ ಹಣ್ಣು ಪಕ್ವವಾಗುತ್ತಿದ್ದು, ಇಂತಹ ಹಣ್ಣುಗಳು ಆರೋಗ್ಯಕ್ಕೆ ಹಾನಿಕಾರಕ ಎಂದು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಎಚ್ಚರಿಸಿದ್ದಾರೆ.

ಇದಕ್ಕೂ ಮುನ್ನ ಡಜನ್‌ಗೆ 300ರಿಂದ 450ರವರೆಗೆ ಮಾರಾಟವಾಗುತ್ತಿದ್ದ ಮಾವಿನ ದರ, ಬುಧವಾರದಿಂದ ಬೇರೆ ಜಿಲ್ಲೆಗಳು ಹಾಗೂ ಆಂಧ್ರಪ್ರದೇಶ, ಮಹಾರಾಷ್ಟ್ರ ರಾಜ್ಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಹಣ್ಣುಗಳು ಮಾರುಕಟ್ಟೆಗೆ ಬಂದ ಪರಿಣಾಮ ಇಳಿಮುಖವಾಗಿದೆ. ಮಾರುಕಟ್ಟೆ ತುಂಬೆಲ್ಲಾ ಮಾವಿನ ಘಮಘಮಿಸುವ ಪರಿಮಳ ಹರಡಿದೆ.

ಮಾವಿನ ಹಂಗಾಮು ಭರದಿಂದ ಆರಂಭವಾಗಿರುವ ಹಿನ್ನೆಲೆಯಲ್ಲಿ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಮಾವು ಖರೀದಿಸಲು ಮುಂದಾಗಿದ್ದಾರೆ. ಗದಗ, ಹುಲಕೋಟಿ ಹಾಗೂ ಮುಂಡರಗಿ ಭಾಗದ ಶುಚಿ ಹಾಗೂ ರುಚಿಕರ ಮಾವಿನಹಣ್ಣುಗಳಿಗೆ ರಾಜ್ಯಾದ್ಯಂತ ಬೇಡಿಕೆ ಇದೆ.

ನೇರಳೆ ಹಣ್ಣು, ಕಲ್ಲಂಗಡಿ, ಕರಬೂಜ, ಅನಾನಸ್, ಸೇಬು, ಮೊಸಂಬಿ ಸೇರಿದಂತೆ ವಿವಿಧ ಹಣ್ಣುಗಳ ನಡುವೆ ಈಗ ಮಾವಿನಹಣ್ಣುಗಳ ವ್ಯಾಪಾರ ಜೋರಾಗಿದೆ.

> "ಗದಗ ಭಾಗದಲ್ಲಿ ರೈತರು ಬೆಳೆದ ಮಾವುಗಳ ಜೊತೆಗೆ ಹೊರರಾಜ್ಯಗಳಿಂದ ಬಂದ ಹಣ್ಣುಗಳನ್ನು ಖರೀದಿಸಿ ಗ್ರಾಮಗಳಿಗೆ ತೆರಳಿ ಮಾರಾಟ ಮಾಡುತ್ತಿದ್ದೇವೆ. ಗ್ರಾಹಕರು ಉತ್ತಮ ಸ್ಪಂದನೆ ನೀಡುತ್ತಿದ್ದಾರೆ. ಇದರಿಂದ ರೈತರು ಹಾಗೂ ವ್ಯಾಪಾರಸ್ಥರಿಗೆ ಲಾಭದ ನಿರೀಕ್ಷೆಯಿದೆ."
> **– ಮೈನುದ್ದೀನ್ ಆಲೂರ, ಇಮ್ತಿಯಾಜ್ ದಫೇದಾರ, ಕರೀಂ ಸರಖವಾಸ, ಮಾವು ವ್ಯಾಪಾರಸ್ಥರು**

ಸ್ಥಳೀಯ ಹಾಗೂ ಹೊರರಾಜ್ಯಗಳಿಂದ ಆಗಮಿಸುವ ಮಾವುಗಳನ್ನು ಖರೀದಿಸಿ ವ್ಯಾಪಾರಸ್ಥರು ಚಿಲ್ಲರೆ ಮಾರುಕಟ್ಟೆಗಳಲ್ಲಿ ಮಾರಾಟ ಮಾಡುತ್ತಿದ್ದಾರೆ.

ನೂರಾರು ವ್ಯಾಪಾರಸ್ಥರು ಹಣ್ಣು ಮಾರಾಟದ ಮೂಲಕ ಜೀವನ ನಡೆಸುತ್ತಿದ್ದು, ಗಾಡಿ, ಆಟೋ ರಿಕ್ಷಾ ಹಾಗೂ ತಳ್ಳುಗಾಡಿಗಳ ಮೂಲಕ ಗ್ರಾಮೀಣ ಪ್ರದೇಶಗಳಿಗೆ ತೆರಳಿ ಮಾರಾಟ ಮಾಡುತ್ತಿದ್ದಾರೆ. ಮುಖ್ಯ ರಸ್ತೆಗಳಲ್ಲಿಯೂ ಹೆಚ್ಚಿನ ಸಂಖ್ಯೆಯಲ್ಲಿ ಮಾವು ಮಾರಾಟಗಾರರು ಕಂಡುಬರುತ್ತಿದ್ದಾರೆ.

ಮಾವಿನ ವ್ಯಾಪಾರದಿಂದ ಬೆಳೆಗಾರರು ಹಾಗೂ ವ್ಯಾಪಾರಸ್ಥರು ಲಾಭದ ನಿರೀಕ್ಷೆಯಲ್ಲಿದ್ದಾರೆ. ಆದರೆ ಎರಡು-ಮೂರು ದಿನಗಳಲ್ಲಿ ಹಣ್ಣು ಮಾರಾಟವಾಗದಿದ್ದರೆ ವ್ಯಾಪಾರಸ್ಥರಿಗೆ ನಷ್ಟವಾಗುವ ಸಾಧ್ಯತೆಯೂ ಇದೆ. ಇದರಿಂದ ರೈತರಿಗೆ ಸಹ ಆರ್ಥಿಕ ಹೊಡೆತ ಬೀಳುವ ಆತಂಕವಿದೆ. ಗ್ರಾಹಕರ ಖರೀದಿಯೇ ರೈತರು ಹಾಗೂ ವ್ಯಾಪಾರಸ್ಥರಿಗೆ ಪ್ರಮುಖ ಆಧಾರವಾಗಿದೆ.

### ಮೇ 20ರೊಳಗೆ ಕ್ರಮ ಕೈಗೊಳ್ಳದಿದ್ದರೆ ಹೋರಾಟ: ಕೋಟುಮಚಗಿ ಗ್ರಾಮಸ್ಥರ ಎಚ್ಚರಿಕೆ

# ಕುಡಿಯುವ ನೀರಿನ ಸಮಸ್ಯೆ ಪರಿಹರಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಟುಮಚಗಿ ಗ್ರಾಮದ ಕುಡಿಯುವ ನೀರಿನ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಮನವಿ ಸಲ್ಲಿಸಿದರು.



ಗ್ರಾಮದಲ್ಲಿ ಕುಡಿಯುವ ನೀರಿನ ಸರಬರಾಜಿನಲ್ಲಿ ಉಂಟಾಗಿರುವ ತೊಂದರೆಯನ್ನು ಪರಿಶೀಲಿಸಿ, ಶಾಶ್ವತ ಪರಿಹಾರ ಕಲ್ಪಿಸಬೇಕು. ಇದೇ ಮೇ 20ರೊಳಗೆ ಸಮಸ್ಯೆ ಬಗೆಹರಿಸದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ನೀರಿನ ಸಂಗ್ರಹಣಾ ಘಟಕವನ್ನು ಸ್ವಚ್ಛಗೊಳಿಸುವುದು, ನೀರು ಸರಬರಾಜು ಪೈಪ್‌ಗಳಲ್ಲಿ ತುಂಬಿರುವ ಫ್ಲೋ-ರೈಡ್ ತೆರವುಗೊಳಿಸುವುದು ಹಾಗೂ ಗ್ರಾಮದ ಎಲ್ಲಾ ಓಣಿಗಳಿಗೆ ನಿರಾತಂಕವಾಗಿ ನೀರು ಸರಬರಾಜಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆಯಿಂದ ಮಹಿಳೆಯರು, ವೃದ್ಧರು ಹಾಗೂ ಮಕ್ಕಳು ದೂರದ ಪ್ರದೇಶಗಳಿಂದ ನೀರು ತಂದು ಜೀವನ ಸಾಗಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, "ಒಂದು ತಿಂಗಳಿಗೂ ಹೆಚ್ಚು ಕಾಲ ಕಳೆದರೂ ಸಮಸ್ಯೆಗೆ ಪರಿಹಾರ ಸಿಕ್ಕಿಲ್ಲ. ಪೈಪ್‌ಗಳಲ್ಲಿ ತುಂಬಿರುವ ಫ್ಲೋರೈಡ್ ತೆರವುಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ಅಧಿಕಾರಿಗಳು ಹೇಳುತ್ತಲೇ ಬಂದಿದ್ದಾರೆ. ಆದರೆ ಸಮಸ್ಯೆ ಹಾಗೆಯೇ ಮುಂದುವರಿದಿರುವುದು ಗ್ರಾಮಸ್ಥರ ಸಹನೆಯನ್ನು ಕೆಣಕಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೇ 20ರೊಳಗೆ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆಗೆ ಸ್ಪಷ್ಟ ಪರಿಹಾರ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು.

ಮನವಿಗೆ ಡಿ.ಜೆ. ಅತ್ತಾರ, ಮಂಜುನಾಥ ಎಲಿಗಾರ, ಶಿವಪ್ಪ ಶಿಂಗಟಾಲಕೇರಿ, ಡಿ. ರವಿ, ಜೆ.ಆರ್. ಸರಕಾವಸ, ರಶೀದ ಹಾಳಕೇರಿ, ಬಿ.ಬಿ. ಕಿತ್ತೂರ, ಎಸ್. ಎಸ್. ನವಲಗುಂದ, ಹಸನಸಾಬ ಬೂದಿಹಾಳ, ಕಮಲಸಾಬ ಮೀರಾನಾಯಕ, ಪಿ.ಆರ್. ಶಿವನಪ್ಪನವರ, ಶೇಕಪ್ಪ ಜಗ್ಗಲ, ಎಚ್. ಸಂಜೀವ, ಆರ್.ವಿ. ಬಾಚಲಾಪೂರ ಸೇರಿದಂತೆ ಅನೇಕ ಗ್ರಾಮಸ್ಥರು ಸಹಿ ಹಾಕಿದ್ದಾರೆ.

### ಬೆಳಗ್ಗೆ 6 ಗಂಟೆಗೂ ಮುನ್ನವೇ ಮದ್ಯ ಲಭ್ಯ ; ಕಠಿಣ ಕ್ರಮಕ್ಕೆ ಸಾರ್ವಜನಿಕರ ಒತ್ತಾಯ

# ಬೆಳಗಿನ ಜಾವವೇ ಅಕ್ರಮ ಮದ್ಯ ಮಾರಾಟ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ಬೆಳಗ್ಗಿನ ಜಾವವೇ ಬಿರುಸುಗೊಂಡಿದ್ದು, ಇದಕ್ಕೆ ಸಂಬಂಧಿಸಿದಂತೆ ಅಬಕಾರಿ ಹಾಗೂ ಪೊಲೀಸ್ ಇಲಾಖೆಯ ಮೌನ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಪಟ್ಟಣದ ವಿವಿಧ ಬಡಾವಣೆಗಳು, ಓಣಿಗಳು ಹಾಗೂ ಗಲ್ಲಿಗಳಲ್ಲಿ ಬೆಳಿಗ್ಗೆ 6 ಗಂಟೆಗೂ ಮುನ್ನವೇ ಮದ್ಯ ಸುಲಭವಾಗಿ ದೊರೆ-ಯುತ್ತಿದ್ದು, ಕೆಲವರು ಶಾಲಾ ಬ್ಯಾಗ್‌ಗಳಲ್ಲಿ ಮದ್ಯ ಸಾಗಾಟ ಮಾಡಿ ಮಾರಾಟ ನಡೆಸುತ್ತಿರುವ ಬಗ್ಗೆ ಸ್ಥಳೀಯರು ಗಂಭೀರ ಆರೋಪ ಮಾಡಿದ್ದಾರೆ. ಶಾಲಾ ಮಕ್ಕಳ ಸಂಚಾರವಿರುವ ಪ್ರದೇಶಗಳಲ್ಲೇ ಇಂತಹ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವುದು ಪೋಷಕರಲ್ಲಿ ಆತಂಕ ಮೂಡಿಸಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಕೆಲವು ಯುವಕರು ಮದ್ಯದ ವ್ಯಸನಕ್ಕೆ ಒಳಗಾಗುತ್ತಿದ್ದು, ಇದರಿಂದ ಸಮಾಜ ಹಾಗೂ ಯುವಜನರ ಭವಿಷ್ಯ ಹಾಳಾಗುತ್ತಿದೆ ಎಂದು ಸಾರ್ವಜನಿಕರು ಕಳವಳ ವ್ಯಕ್ತಪಡಿಸಿದ್ದಾರೆ. ಹಾಲು ಹಾಗೂ ದಿನಸಿ ಅಂಗಡಿಗಳು ತೆರೆಯುವ ಮುನ್ನವೇ ಅಕ್ರಮ ಮದ್ಯ ಮಾರಾಟಗಾರರು ಗ್ರಾಹಕರಿಗೆ ಮದ್ಯ ಪೂರೈಕೆ ಮಾಡುತ್ತಿರುವುದು ಸಮಾಜದಲ್ಲಿ ಅಶಾಂತಿಯ ವಾತಾವರಣ ನಿರ್ಮಾಣ ಮಾಡುತ್ತಿದೆ ಎನ್ನಲಾಗಿದೆ.



ಸ್ಥಳೀಯರ ಪ್ರಕಾರ, ಕೆಲವು ಬಾರ್‌ಗಳು ನಿಯಮ ಉಲ್ಲಂಘಿಸಿ ತಡ ರಾತ್ರಿಯವರೆಗೂ ಹಾಗೂ ಮುಂಜಾನೆಯಲ್ಲಿಯೇ ಗ್ರಾಹಕರಿಗೆ ಮದ್ಯ ಸೇವನೆಗೆ ಅವಕಾಶ ನೀಡುತ್ತಿವೆ. ಇಂತಹ ಬೆಳವಣಿಗೆಗಳ ನಡುವೆಯೂ ಅಬಕಾರಿ ಮತ್ತು ಪೊಲೀಸ್ ಇಲಾಖೆ ಯಾವುದೇ ಕಠಿಣ ಕ್ರಮ ಕೈಗೊಳ್ಳದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಪ್ರಜ್ಞಾವಂತ ನಾಗರಿಕರು ಆರೋಪಿಸಿದ್ದಾರೆ.

ಅಕ್ರಮ ಮದ್ಯ ಮಾರಾಟ ನಡೆಯುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ದಾಳಿ ನಡೆಸದೆ ನಿರ್ಲಕ್ಷ್ಯ ವಹಿಸಿರುವುದು "ಮೌನ ಅನುಮತಿ"ಯೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ. ಪಟ್ಟಣದ ನಾಗರಿಕರು, ಪೋಷಕರು ಹಾಗೂ ವಿವಿಧ ಸಂಘಟನೆಗಳು ತಕ್ಷಣವೇ ದಾಳಿ ನಡೆಸಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದ್ದಾರೆ.

ಶಾಲಾ ವಾತಾವರಣ, ಯುವಜನರ ಭವಿಷ್ಯ ಹಾಗೂ ಬಡ ಕಾರ್ಮಿಕರ ಬದುಕು ರಕ್ಷಿಸಲು ಅಬಕಾರಿ ಇಲಾಖೆ ತಕ್ಷಣ ಗಂಭೀರ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಖರ್ಚು ಮಾಡಿದ ಹಣ ಬಾರದಂತಾಗಿದೆ

ಅಕ್ರಮ ಮದ್ಯ ಮಾರಾಟ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಬಡ ಕುಟುಂಬಗಳ ಮೇಲೂ ಗಂಭೀರ ಪರಿಣಾಮ ಬೀರುತ್ತಿದೆ. ಪೆಟ್ಟಿಗೆ ಅಂಗಡಿಗಳು ಹಾಗೂ ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟವಾಗುತ್ತಿರುವುದರಿಂದ ಯುವಕರು ವ್ಯಸನಿಗಳಾಗುತ್ತಿದ್ದು, ಕೂಲಿ ಕಾರ್ಮಿಕರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತಿವೆ ಎಂದು ಸಾರ್ವಜನಿಕರು ದೂರಿದ್ದಾರೆ.

## 'ಕಾಲೇಜು ಕ್ಯಾಂಪಸ್‌ನಲ್ಲಿ ಜಲಾಗಾರ ಬೇಡ'

▶▶ ಮೊದಲನೇ ಪುಟದಿಂದ

ದಲಿತ ಯುವ ಮುನ್ನಡೆ ಸಂಘಟನೆಯ ರಾಜ್ಯಾಧ್ಯಕ್ಷ ಡಿ.ಬಿ. ಫಕ್ಕೀರಪ್ಪ ಮಾತನಾಡಿ, ಪುರಸಭೆಯವರು ಗುತ್ತಿಗೆದಾರರ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ. ಕಾಲೇಜು ಅಭಿವೃದ್ಧಿ ಸಮಿತಿ ಹಾಗೂ ಊರಿನ ಹಿರಿಯರ ಅಭಿಪ್ರಾಯ ಪಡೆಯದೇ ಕಾಮಗಾರಿಗೆ ಪರವಾನಗಿ ನೀಡಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಕಾಮಗಾರಿ ಸ್ಥಳದಲ್ಲಿದ್ದ ಗಿಡ-ಮರಗಳನ್ನು ತೆರವುಗೊಳಿಸಲಾಗಿದೆ. ಕಾಲೇಜು ಕ್ಯಾಂಪಸ್‌ನಲ್ಲಿ ತಗಡಿನ ಶೆಡ್ ನಿರ್ಮಿಸಿ, ಕಬ್ಬಿಣ, ಮರಳು, ಖಡಿ ಸೇರಿದಂತೆ ವಿವಿಧ ಸಾಮಗ್ರಿಗಳನ್ನು ಸಂಗ್ರಹಿಸಿರುವುದರಿಂದ ನಿತ್ಯದ ಶೈಕ್ಷಣಿಕ ಚಟುವಟಿಕೆಗಳಿಗೆ ಅಡ್ಡಿಯಾಗುತ್ತಿದೆ ಎಂದು ದೂರಿದರು.

ಈಶ್ವರನಗರದಲ್ಲಿ ನಿರ್ಲಕ್ಷ್ಯಕ್ಕೊಳಗಾಗಿದ್ದ ಉದ್ಯಾನವನವನ್ನು ಅಲ್ಲಿನ ನಿವಾಸಿಗಳೇ ಸ್ವಂತ ಖರ್ಚಿನಲ್ಲಿ ಅಭಿವೃದ್ಧಿಪಡಿಸಿದ್ದಾರೆ. ಆದರೆ ಅಲ್ಲಿಯೂ ಜಲಾಗಾರ ನಿರ್ಮಿಸಲು ಮುಂದಾಗಿರುವುದು ಸರಿಯಲ್ಲ. ಪುರಸಭೆಯವರು ಸೂಕ್ತ ಜಾಗ ಗುರುತಿಸಿ ಜಲಾಗಾರ ಕಾಮಗಾರಿಯನ್ನು ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿದರು.

ತುಂಗಭದ್ರಾ ನದಿಯಿಂದ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆಯ ಸುಧಾರಣೆಗಾಗಿ ಒಟ್ಟು ₹39 ಕೋಟಿ ವೆಚ್ಚದ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಇದರಡಿ ಪಟ್ಟಣದಲ್ಲಿ 10 ಲಕ್ಷ ಲೀಟರ್ ಸಾಮರ್ಥ್ಯದ ಎರಡು ಜಲಾಗಾರಗಳ ನಿರ್ಮಾಣ ಕಾಮಗಾರಿ ಆರಂಭವಾಗಿದೆ.

ಪುರಸಭೆಯವರು ಎಂಎ ಕಾಲೇಜು ಆವರಣ ಹಾಗೂ ಈಶ್ವರನಗರ ಉದ್ಯಾನವನದಲ್ಲಿ ಜಲಾಗಾರ ನಿರ್ಮಾಣಕ್ಕೆ ಮುಂದಾಗಿದ್ದಾರೆ.

ಕಾಮಗಾರಿ ಸ್ಥಳಕ್ಕೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಇಂಜಿನಿಯರ್ ಜೆ.ಬಿ. ಹೊಸಮನಿ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, "ನೀರು ಸರಬರಾಜಿಗೆ ಅನುಕೂಲಕರವಾದ ಸ್ಥಳದಲ್ಲೇ ಜಲಾಗಾರ ನಿರ್ಮಿಸಲಾಗುತ್ತಿದೆ. ಕಾಮಗಾರಿಗೆ ವಿರೋಧವಿದ್ದರೆ ಸ್ಥಳೀಯ ಪುರಸಭೆಗೆ ಲಿಖಿತ ರೂಪದಲ್ಲಿ ಮನವಿ ಸಲ್ಲಿಸಬೇಕು. ಪುರಸಭೆಯ ನಿರ್ದೇಶನದಂತೆ ಗುತ್ತಿಗೆದಾರರು ನಡೆದುಕೊಳ್ಳುತ್ತಾರೆ" ಎಂದು ತಿಳಿಸಿದರು.

### ಜಾಬ್ ಕಾರ್ಡ್ ಪಡೆದು ಗ್ರಾಮದಲ್ಲೇ ಉದ್ಯೋಗ ಪಡೆಯಿರಿ: ಇಒ ಆರ್.ವಿ. ದೊಡ್ಡಮನಿ

# ನರೇಗಾ ಯೋಜನೆ ಸದುಪಯೋಗ ಪಡೆದುಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಕೋಗನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೋವನಕೊಪ್ಪ ಗ್ರಾಮದಲ್ಲಿ ಪ್ರಗತಿಯಲ್ಲಿರುವ ಕೆರೆ ಹೂಳೆತ್ತುವ ಕಾಮಗಾರಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಆರ್. ವಿ. ದೊಡ್ಡಮನಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಅಡಿಯಲ್ಲಿ ಕೂಲಿಕಾರರು ಗ್ರಾಮ ಪಂಚಾಯಿತಿಗೆ ನಮೂನೆ-6ರಲ್ಲಿ ಕೆಲಸದ ಬೇಡಿಕೆ ಸಲ್ಲಿಸಿ, ಗ್ರಾಮದಲ್ಲಿಯೇ ಉದ್ಯೋಗದ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಜಾಬ್ ಕಾರ್ಡ್ ಇಲ್ಲದ ಕೂಲಿ ಕಾರ್ಮಿಕರು ಅಗತ್ಯ ದಾಖಲೆಗಳನ್ನು ನೀಡಿ ತಕ್ಷಣವೇ ಹೊಸ ಜಾಬ್ ಕಾರ್ಡ್ ಪಡೆದು ಯೋಜನೆಯ ಲಾಭ ಪಡೆಯಬೇಕು ಎಂದು ಸಲಹೆ ನೀಡಿದರು. ಬೇಸಿಗೆಯ ತೀವ್ರ ಬಿಸಿಲಿನ ಹಿನ್ನೆಲೆಯಲ್ಲಿ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಿ, ಹೆಚ್ಚು ನೀರು ಕುಡಿಯಬೇಕು ಹಾಗೂ ಕುದಿಸಿ ಆರಿಸಿದ ನೀರನ್ನೇ ಸೇವಿಸಬೇಕು ಎಂದು ತಿಳಿಸಿದರು.



ಕೂಲಿಕಾರರಿಗೆ ಅಳತೆಗೆ ಅನುಗುಣವಾಗಿ ಕೂಲಿ ಪಾವತಿಯಾಗುವುದರಿಂದ ನಿಗದಿತ ಪ್ರಮಾಣದಲ್ಲಿ ಕೆಲಸ ನಿರ್ವಹಿಸಬೇಕು. ಪ್ರತಿದಿನ ಎನ್‌ಎಂಎಂಎಸ್ (ಎನ್ ಎಮ್‌ಎಮ್‌ಎಸ್) ಆ್ಯಪ್ ಮೂಲಕ ಎರಡು ಬಾರಿ ಹಾಜರಾತಿ ದಾಖಲಿಸಲಾಗುತ್ತದೆ. ಬೆಳಿಗ್ಗೆ ಮತ್ತು ಮಧ್ಯಾಹ್ನ ಎರಡೂ ಸಮಯದಲ್ಲಿ ಕಡ್ಡಾಯವಾಗಿ ಹಾಜರಾತಿ ಹಾಕಿಸಬೇಕು. ಒಂದು ವೇಳೆ ಬೆಳಗಿನ ಹಾಜರಾತಿ ಹಾಕಿಸಿ ಮಧ್ಯಾಹ್ನದ ಹಾಜರಾತಿ ಹಾಕಿಸದಿದ್ದರೆ ಆ ದಿನದ ಕೂಲಿ ಪಾವತಿಯಾಗುವುದಿಲ್ಲ ಎಂದು ಎಚ್ಚರಿಸಿದರು.

ನರೇಗಾ ಯೋಜನೆಯ ಮಾಹಿತಿ ನೀಡಿದ ಅವರು, ಕಾಮಗಾರಿಯ ಗುಣಮಟ್ಟ ಹಾಗೂ ಭೌತಿಕ ಪ್ರಗತಿ ಪರಿಶೀಲಿಸಿದರು. ಇದೇ ವೇಳೆ ಇ-ಕೆವೈಸಿ ಪ್ರಕ್ರಿಯೆ, ಹಿರಿಯ ನಾಗರಿಕರು, ವಿಕಲಚೇತನರು ಹಾಗೂ ಗರ್ಭಿಣಿಯರಿಗೆ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು.

ಗ್ರಾಮದ ಜನರು ಗುಳೆ ಹೋಗದಂತೆ ತಡೆದು, ನರೇಗಾ ಯೋಜನೆಯ ಮಾಹಿತಿ ನೆರೆಹೊರೆಯವರಿಗೆ ಹಂಚಿಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನರೇಗಾ ಸಿಬ್ಬಂದಿ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

> "ನರೇಗಾ ಯೋಜನೆಯ ಪಾರದರ್ಶಕ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರ ಎನ್‌ಎಂಎಂಎಸ್ ಆ್ಯಪ್ ಕಡ್ಡಾಯಗೊಳಿಸಿದೆ. ಇದರಡಿ ಕೂಲಿಕಾರರ ಹಾಜರಾತಿಯನ್ನು ಆಧಾರ್ ಆಧಾರಿತ ಛಾಯಾಚಿತ್ರದ ಮೂಲಕ ಪ್ರತಿದಿನ ಎರಡು ಬಾರಿ ದಾಖಲಿಸಲಾಗುತ್ತಿದೆ."
> **– ಆರ್. ವಿ. ದೊಡ್ಡಮನಿ,** ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ

### ಪ್ರತಿಯೊಂದು ಮಗು ಶಾಲೆಗೆ ಸೇರ್ಪಡೆಯಾಗಬೇಕು: ಎಸ್.ಬಿ. ಗವಿ

# ಶಾಲಾ ದಾಖಲಾತಿ ಆಂದೋಲನಕ್ಕೆ ಜನಜಾಗೃತಿ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕರ್ನಾಟಕ ಸರ್ಕಾರದ ಶಿಕ್ಷಣ ಇಲಾಖೆಯ ಶಾಲಾ ದಾಖಲಾತಿ ಆಂದೋಲನ ಅಂಗವಾಗಿ ಜಕ್ಕಲಿ ಗ್ರಾಮದ ಕೆ.ಜಿ.ಎಸ್ ಹಾಗೂ ಎಂ.ಸಿ.ಎಸ್ ಸರ್ಕಾರಿ ಶಾಲೆಗಳಲ್ಲಿ ಬುಧವಾರ ಜನಜಾಗೃತಿ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯ ಶಿಕ್ಷಕ ಎಸ್.ಬಿ. ಗವಿ, "6 ರಿಂದ 14 ವರ್ಷದೊಳಗಿನ ಪ್ರತಿಯೊಂದು ಮಗು ಕಡ್ಡಾಯವಾಗಿ ಶಾಲೆಗೆ ಸೇರಬೇಕು. ಶಿಕ್ಷಣದಿಂದ ಯಾವುದೇ ಮಗು ವಂಚಿತವಾಗಬಾರದು ಎಂಬ ಉದ್ದೇಶದಿಂದ ಸರ್ಕಾರ ಶಾಲಾ ದಾಖಲಾತಿ ಆಂದೋಲನ ಹಮ್ಮಿಕೊಂಡಿದೆ. ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಉತ್ತಮ ಶಿಕ್ಷಣದ ಸದುಪಯೋಗ ಪಡೆಯಬೇಕು" ಎಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಹಾಗೂ ಉಚಿತ ಶಿಕ್ಷಣದೊಂದಿಗೆ ಪಠ್ಯಪುಸ್ತಕ, ಸಮವಸ್ತ್ರ, ಶೂ-ಸಾಕ್ಸ್, ಪೌಷ್ಟಿಕ ಬಿಸಿಯೂಟ, ಕ್ಷೀರಭಾಗ್ಯ ಯೋಜನೆ, ಗಣಕಯಂತ್ರ ಶಿಕ್ಷಣ ಹಾಗೂ ಸುಸಜ್ಜಿತ ಗ್ರಂಥಾಲಯ ಸೇರಿದಂತೆ ಹಲವು ಸೌಲಭ್ಯಗಳನ್ನು ಸರ್ಕಾರ ಒದಗಿಸುತ್ತಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಅನುಭವಿ ಶಿಕ್ಷಕರಿಂದ ನಲಿ-ಕಲಿ ಪದ್ಧತಿಯಲ್ಲಿ ಬೋಧನೆ ನಡೆಯುತ್ತಿದ್ದು, ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಿಗೆ ಆದ್ಯತೆ ನೀಡಲಾಗುತ್ತಿದೆ. ಜೊತೆಗೆ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಯನ್ನೂ ನಿಯಮಿತವಾಗಿ ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಕಾರ್ಯದಲ್ಲಿ ಸಾರ್ವಜನಿಕರು ಹಾಗೂ ಪೋಷಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ಹೆಚ್.ಎಸ್. ಬಿಂಗಿ, ಶಿಕ್ಷಕರಾದ ಎಂ.ವಿ. ತಾಳಿಕೋಟಿ, ಎಸ್.ಎ. ಪಲ್ಲೇದ, ಶಿಕ್ಷಕಿಯರಾದ ಎ.ಬಿ. ಜಕ್ಕಲಿ, ಎ.ಪಿ. ಶೆಟ್ಟರ, ಪಿ.ಜಿ. ಹುಯಿಲಗೋಳ, ಎಸ್.ಎಸ್. ಯಲ್ಲರಡ್ಡಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಅಂದಪ್ಪ ಮಾದರ ಸೇರಿದಂತೆ ಹಲವರು ಉಪಸ್ಥಿತರಿದ್ದರು.


### ಗಣ್ಯ ವ್ಯಾಪಾರಸ್ಥರ ಸ್ಮರಣಾರ್ಥ ಕಾರ್ಯಕ್ರಮ ಆಯೋಜನೆ

# ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದತ್ತಿ ಉಪನ್ಯಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ವತಿಯಿಂದ ಗಣ್ಯ ವ್ಯಾಪಾರಸ್ಥರು ಹಾಗೂ ಸಮಾಜ ಸೇವಕರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆ.

ಬೆಟಗೇರಿ-ಗದಗದ ಪ್ರಸಿದ್ಧ ಬೇಲೇರಿ ಮನೆತನದ ಈಶ್ವರಪ್ಪ ಮಲ್ಲಿಕಾರ್ಜುನಪ್ಪ ಬೇಲೇರಿ ಅವರು 1938ರಲ್ಲಿ ಜನಿಸಿ, ತಂದೆಯವರ ಬೆಲ್ಲ ವ್ಯಾಪಾರ ಹಾಗೂ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಬಳಿಕ ಆಹಾರ ಧಾನ್ಯ, ಹತ್ತಿ, ಅರಳಿ ಹಾಗೂ ಎಣ್ಣೆಕಾಳು ದಲಾಲಿ ವ್ಯಾಪಾರದಲ್ಲಿ ಹೆಸರು ಮಾಡಿದ್ದರು. ಯಲಬುರ್ಗಾ ತಾಲೂಕು ಸೇರಿದಂತೆ ಹಲವು ಭಾಗಗಳಲ್ಲಿ ರೈತರೊಂದಿಗೆ ವ್ಯಾಪಾರ ವಹಿವಾಟು ವಿಸ್ತರಿಸಿ ಜನಾನುರಾಗಿಯಾಗಿದ್ದರು. ತೋಂಟದಾರ್ಯ ಮಠ ಸೇರಿದಂತೆ ಹಲವು ಧಾರ್ಮಿಕ ಹಾಗೂ ಸಾಮಾಜಿಕ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿದ್ದರು. ಅವರ ಸವಿನೆನಪಿಗಾಗಿ ದತ್ತಿ ಉಪನ್ಯಾಸ ಹಮ್ಮಿಕೊಳ್ಳಲಾಗಿದೆ. ಹಾಗೆಯೇ, ಮೂಲತಃ ರಾಜಸ್ಥಾನದವರಾದ ಸೋಹನರಾಜಿ ಮೀತಾಲಾಜಿ ಜೈನ ಅವರು ಶಿವಮೊಗ್ಗದಲ್ಲಿ ದಿನಸಿ ವ್ಯಾಪಾರ ಆರಂಭಿಸಿ, ಬಳಿಕ ಗದಗದಲ್ಲಿ ಸೊಂಡಗಿ ಹಾಗೂ ಕಿರಾಣಿ ಸಗಟು ವ್ಯಾಪಾರವನ್ನು ವಿಸ್ತರಿಸಿದ್ದರು. "ಅರಿಹಂತ ಟ್ರೇಡರ್ಸ್" ಹಾಗೂ "ಅರಿಹಂತ ಅಗ್ರೋ ಇಂಡಸ್ಟ್ರೀಸ್" ಮೂಲಕ ಜಿಲ್ಲೆಯಾದ್ಯಂತ ವ್ಯಾಪಾರ ಜಾಲ ನಿರ್ಮಿಸಿದ್ದರು. ಅವರ ಸ್ಮರಣಾರ್ಥವೂ ದತ್ತಿ ಉಪನ್ಯಾಸ ಆಯೋಜಿಸಲಾಗಿದೆ.





ಇನ್ನೂ ಹಾನಗಲ್ ತಾಲೂಕಿನ ತಿಳವಳ್ಳಿ ಗ್ರಾಮದ ಗುಡ್ಡಪ್ಪ ಸಣ್ಣನಿಂಗಪ್ಪ ಹೆಗಡೆಕಟ್ಟಿ ಅವರು ಕಿರಾಣಿ ವ್ಯಾಪಾರ ಕ್ಷೇತ್ರದಲ್ಲಿ ಗುರುತಿಸಿಕೊಂಡು, ಆರ್ಯವೈಶ್ಯ ಸಮಾಜದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಸಕ್ರಿಯರಾಗಿದ್ದ ಅವರು ಅನೇಕ ದೇವಸ್ಥಾನಗಳಿಗೆ ಸೇವೆ ಸಲ್ಲಿಸಿದ್ದರು. ಅವರ ಸವಿನೆನಪಿನಲ್ಲಿಯೂ ದತ್ತಿ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹನಿ ನೀರಾವರಿಯಲ್ಲಿ ದಾಖಲೆ ಇಳುವರಿ: ಸಾಧಕ ರೈತರಿಗೆ ಗೌರವ




■ ವಿಜಯಸಾಕ್ಷಿ ಸುದ್ದಿ, ಗದಗ

ಹನಿ ನೀರಾವರಿ ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿರುವ ನೆಟಾಫಿಮ್ ಇಂಡಿಯಾ ಸಂಸ್ಥೆಯ ವತಿಯಿಂದ ಗದಗದಲ್ಲಿ ಮೆಕ್ಸಿಕನ್ ಬೀನ್ಸ್ ಬೆಳೆಗಾರರ ಸಮಾವೇಶ, ಪ್ರಗತಿಪರ ರೈತರ ತರಬೇತಿ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು.

ಸಿಂಗಟಾಲೂರು ಏತ ಹನಿ ನೀರಾವರಿ ಯೋಜನೆ (ಎಸ್.ಎಲ್.ಐ.ಎಸ್-3) ಅಡಿಯಲ್ಲಿ ರೈತರಿಗೆ ಹೊಸ ಬೆಳೆಗಳ ಪರಿಚಯ, ತಾಂತ್ರಿಕ ಜ್ಞಾನ ಹಂಚಿಕೆ ಹಾಗೂ ಆಧುನಿಕ ಕೃಷಿ ಪದ್ಧತಿಗಳ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

11,330 ಹೆಕ್ಟೇರ್ ಪ್ರದೇಶ ವ್ಯಾಪ್ತಿಯ ಈ ಯೋಜನೆಯಡಿ 7,800ಕ್ಕೂ ಹೆಚ್ಚು ರೈತರು ಪ್ರಯೋಜನ ಪಡೆಯುತ್ತಿದ್ದು, ಮೆಕ್ಸಿಕನ್ ಬೀನ್ಸ್ ಬೆಳೆ ವಿಸ್ತೀರ್ಣವೂ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಹಿಂಗಾರು-2025 ಹಂಗಾಮಿನಲ್ಲಿ 46 ರೈತರು 80 ಎಕರೆ ಪ್ರದೇಶದಲ್ಲಿ ಮೆಕ್ಸಿಕನ್ ಬೀನ್ಸ್ ಬೆಳೆದು ಒಟ್ಟು 48 ಮೆಟ್ರಿಕ್ ಟನ್ ಉತ್ಪಾದನೆ ದಾಖಲಿಸಿದ್ದಾರೆ. ಎಕರೆಗೆ ಗರಿಷ್ಠ 1.35 ಮೆಟ್ರಿಕ್ ಟನ್ ಇಳುವರಿ ಸಾಧಿಸಿರುವುದು ವಿಶೇಷವಾಗಿದೆ.

ಉತ್ತಮ ಸಾಧನೆ ಮಾಡಿದ ರೈತರಾದ ನಿಂಗಪ್ಪ ಗಾಜಿ, ಹೇಮಣ್ಣ ನೂಕಾಪೂರ, ಚಂದ್ರಶೇಖರ ಛಬ್ಬೇರಭಾವಿ, ರಾಚಪ್ಪ ಸಿದ್ದಪ್ಪ ಗಾಳಪ್ಪನವರ, ವೆಂಕರೆಡ್ಡಿ ನಾಗನೂರ ಹಾಗೂ ರೈತ ಮಹಿಳೆ ನಾಗರತ್ನ ಮಾರನಬಸರಿ ಅವರನ್ನು ಪ್ರಮಾಣ ಪತ್ರ ಹಾಗೂ ಉಡುಗೊರೆ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕೆವಿಕೆ ಹುಲಕೋಟಿಯ ನಿವೃತ್ತ ವಿಜ್ಞಾನಿ ಎಸ್.ಕೆ. ಮುದ್ಲಾಪುರ ಅವರು ಸಮಗ್ರ ಕೀಟ ನಿರ್ವಹಣೆ ಹಾಗೂ ಪೋಷಕಾಂಶ ನಿರ್ವಹಣೆ ಕುರಿತು ರೈತರಿಗೆ ಮಾಹಿತಿ ನೀಡಿದರು.

ನೆಟಾಫಿಮ್ ಇಂಡಿಯಾದ ಡಿಜಿಎಂ ಗಿರೀಶ ದೇಶಪಾಂಡೆ ಮಾತನಾಡಿ, "ಮೆಕ್ಸಿಕನ್ ಬೀನ್ಸ್‌ಗೆ ನಗರ ಪ್ರದೇಶಗಳಲ್ಲಿ ಬೇಡಿಕೆ ಹೆಚ್ಚುತ್ತಿದೆ. ರೈತರು ಹೆಚ್ಚಿನ ಪ್ರಮಾಣದಲ್ಲಿ ಈ ಬೆಳೆ ಬೆಳೆಸಿ ಉತ್ತಮ ಮಾರುಕಟ್ಟೆ ಅವಕಾಶಗಳನ್ನು ಬಳಸಿಕೊಳ್ಳಬೇಕು," ಎಂದು ಹೇಳಿದರು.

ನೆಟಾಫಿಮ್ ಸಂಸ್ಥೆಯ ಬೇಸಾಯ ತಜ್ಞ ಆನಂದ ಆಲೂರು ಹಾಗೂ ಅಗ್ರಿಗ್ರೋ ಸಂಸ್ಥೆಯ ಪ್ರೊಪ್ರೈಟರ್ ರಾಹುಲ್ ರಾಜನ್ ಅವರು ರೈತರಿಗೆ ತಾಂತ್ರಿಕ ಮಾಹಿತಿ ನೀಡಿ, ಮುಂದಿನ ಹಂಗಾಮುಗಳಲ್ಲಿ ಉತ್ತಮ ಬೆಳೆಗೆ ಖರೀದಿ ಮಾಡುವ ಭರವಸೆ ನೀಡಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ರೈತರು ಭಾಗವಹಿಸಿದ್ದ ಈ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

# ಆರು ಮಂದಿಗೆ ನೇತ್ರ ಶಸ್ತ್ರಚಿಕಿತ್ಸೆ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಇನ್ನರ್ ವ್ಹೀಲ್ ಸಂಸ್ಥೆ ಹಾಗೂ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಸಹಯೋಗದಲ್ಲಿ ಜಿಲ್ಲಾ ಕ್ರೀಡಾಂಗಣ ಸಮೀಪದ ರೋಟರಿ ಕಣ್ಣಿನ ಆಸ್ಪತ್ರೆಯಲ್ಲಿ ಉಚಿತ ನೇತ್ರ ತಪಾಸಣೆ ಮತ್ತು ಮಸೂರ ಅಳವಡಿಕೆ ಶಸ್ತ್ರಚಿಕಿತ್ಸಾ ಶಿಬಿರ ಆಯೋಜಿಸಲಾಯಿತು.

ಶಿಬಿರದಲ್ಲಿ ಸುಮಾರು 15 ಜನ ರೋಗಿಗಳ ತಪಾಸಣೆ ನಡೆಸಲಾಗಿದ್ದು, ಶಸ್ತ್ರಚಿಕಿತ್ಸೆ ಅಗತ್ಯವಿದ್ದ ಹಾಗೂ ಯೋಗ್ಯರೆಂದು ಗುರುತಿಸಲಾದ ಆರು ಮಂದಿಗೆ ಯಶಸ್ವಿಯಾಗಿ ನೇತ್ರ ಶಸ್ತ್ರಚಿಕಿತ್ಸೆ ನಡೆಸಲಾಯಿತು.




207ನೇ ಶಸ್ತ್ರಚಿಕಿತ್ಸಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ವಹಿಸಿ, ಸಂಸ್ಥೆಯ ಜನಪರ ಸೇವಾ ಕಾರ್ಯಗಳ ಕುರಿತು ಮಾಹಿತಿ ನೀಡಿದರು.

ಐಒಎಲ್ ಅಧ್ಯಕ್ಷ ಡಾ. ಶೇಖರ ಡಿ. ಸಜ್ಜನರ ಮಾತನಾಡಿ, ಶಸ್ತ್ರಚಿಕಿತ್ಸೆ ಪಡೆದ ರೋಗಿಗಳು ವೈದ್ಯರ ಸಲಹೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ಡಾ. ರಾಜೇಂದ್ರ ಗಚ್ಚಿನಮಠ, ಶ್ರೀಧರ ಧರ್ಮಾಯತ ಹಾಗೂ ಹೆಚ್. ಎಸ್. ಪಾಟೀಲ ಉಪಸ್ಥಿತರಿದ್ದರು. ಡಾ. ರಾಜೇಂದ್ರ ಗಚ್ಚಿನಮಠ ಸ್ವಾಗತಿಸಿದರು. ಕಾರ್ಯದರ್ಶಿ ಬಾಲಕೃಷ್ಣ ಕಾಮತ ಕಾರ್ಯಕ್ರಮ ನಿರೂಪಿಸಿದರು. ಸುರೇಶ ಕುಂಬಾರ ವಂದಿಸಿದರು.

ಡಾ. ಜ್ಯೋತಿ ಪಾಟೀಲ ಶಸ್ತ್ರಚಿಕಿತ್ಸೆ ನೆರವೇರಿಸಿ, ರೋಗಿಗಳಿಗೆ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಸಲಹೆ ನೀಡಿದರು. ನೇತ್ರ ಸಹಾಯಕ ರುದ್ರೇಶ ಅವರು ಶಸ್ತ್ರಚಿಕಿತ್ಸೆಯ ನಂತರ ಪಾಲಿಸಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಚನ್ನವೀರಪ್ಪ ಹುಣಶಿಕಟ್ಟಿ, ಡಾ. ಪ್ರದೀಪ ಉಗಲಾಟ, ಡಾ. ಕಮಲಾಕ್ಷಿ ಅಂಗಡಿ, ಅಕ್ಷಯ ಶೆಟ್ಟಿ, ವಿಶ್ವನಾಥ ಯಳಮಲಿ, ಪ್ರೀತಿ ಶಿವಪ್ಪನಮಠ, ಡಾ. ವಿನಯ್ ಟಿಕಾರೆ, ಮಹೇಶ ಹಿಂಡಿ ಹಾಗೂ ಶಿವಾಚಾರ್ಯ ಹೊಸಳ್ಳಿಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಬಿರದಲ್ಲಿ ರುದ್ರೇಶ, ನೇತ್ರಾ ಹಾಗೂ ಆನಂದ ಸಿಂಗ್ರಿ ಶಸ್ತ್ರಚಿಕಿತ್ಸಾ ಕಾರ್ಯಕ್ಕೆ ಸಹಕರಿಸಿದರು.

### 'ಚಿನ್ನ ಖರೀದಿ ಬೇಡ, ವರ್ಕ್ ಫ್ರಮ್ ಹೋಂ' ಸಲಹೆಗೆ ಸ್ಲಂ ಸಮಿತಿ ಆಕ್ರೋಶ

# ಮೋದಿ ಹೇಳಿಕೆ ಜನಸಾಮಾನ್ಯರ ಬದುಕಿಗೆ ಹೊರೆ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಆರ್ಥಿಕತೆ ಸುಧಾರಿಸಲು ಒಂದು ವರ್ಷ ಚಿನ್ನ ಖರೀದಿ ಮಾಡಬೇಡಿ, ಪೆಟ್ರೋಲ್-ಡೀಸೆಲ್ ಮಿತವಾಗಿ ಬಳಸಿ, ಎಲೆಕ್ಟ್ರಿಕ್ ವಾಹನಗಳನ್ನು ಬಳಸಿ, ವರ್ಕ್ ಫ್ರಮ್ ಹೋಂ ಮಾಡಿ ಹಾಗೂ ಸಾರ್ವಜನಿಕ ಸಾರಿಗೆ ಹೆಚ್ಚಾಗಿ ಬಳಸಬೇಕು ಎಂಬ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಹೇಳಿಕೆ ಬಡ ಹಾಗೂ ಮಧ್ಯಮ ವರ್ಗದ ಜನರ ಮೇಲೆ ಆರ್ಥಿಕ ಹೊರೆ ಹಾಕುವ ಕುತಂತ್ರವಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ಹಾಗೂ ಮುಖಂಡ ಮೌಲಾಸಾಬ್ ಹೆಚ್. ಗಚ್ಚಿ, ಪಶ್ಚಿಮ ಏಷ್ಯಾದಲ್ಲಿನ ದೀರ್ಘಕಾಲದ ಸಂಘರ್ಷದಿಂದ ಜಾಗತಿಕ ಪೂರೈಕೆ ಸರಪಳಿಗಳ ಮೇಲೆ ಒತ್ತಡ ಉಂಟಾಗಿದ್ದು, ಭಾರತ ವಿದೇಶಿ ವಿನಿಮಯ ನಿಕ್ಷೇಪಗಳನ್ನು ಸಂರಕ್ಷಿಸಬೇಕಿದೆ ಎಂದು ಪ್ರಧಾನಮಂತ್ರಿ ಹೇಳಿರುವುದು ದೇಶದಲ್ಲಿ ಇಂಧನ ಮತ್ತು ಬೆಲೆ ಏರಿಕೆಯ ಸಂಕಷ್ಟಕ್ಕೆ ಮುನ್ಸೂಚನೆಯಾಗಿದೆ ಎಂದು ತಿಳಿಸಿದ್ದಾರೆ.



ಪಶ್ಚಿಮ ಏಷ್ಯಾದ ಯುದ್ಧದ ಆರಂಭದಲ್ಲಿ ದೇಶಕ್ಕೆ ಯಾವುದೇ ತೊಂದರೆ ಆಗುವುದಿಲ್ಲ ಎಂದು ಕೇಂದ್ರ ಸರ್ಕಾರ ಜನರಿಗೆ ಭರವಸೆ ನೀಡಿತ್ತು. ಆದರೆ ಈಗ ಸಾಮಾನ್ಯ ಜನರ ಮೇಲೆಯೇ ಹೊರೆ ಹಾಕಲು ಮುಂದಾಗಿದೆ. ಸರ್ಕಾರ ಮುಂದಾಗುವ ಇಂಧನ ಬಿಕ್ಕಟ್ಟಿಗೆ ಸಮರ್ಪಕ ಸಿದ್ಧತೆ ನಡೆಸುವಲ್ಲಿ ವಿಫಲವಾಗಿದೆ ಎಂದು ಅವರು ದೂರಿದ್ದಾರೆ.

ಪ್ರಧಾನಮಂತ್ರಿ ಮೊದಲು ಕೇಂದ್ರ ಸಚಿವರು, ಸಂಸದರು ಹಾಗೂ ವಿವಿಧ ರಾಜ್ಯಗಳ ಜನಪ್ರತಿನಿಧಿಗಳು ಕೋಟ್ಯಂತರ ರೂಪಾಯಿ ಖರ್ಚು ಮಾಡಿ ನಡೆಸುವ ರ್‍ಯಾಲಿ ಮತ್ತು ಕಾರ್ಯಕ್ರಮಗಳನ್ನು ನಿಲ್ಲಿಸುವಂತೆ ಸೂಚಿಸಬೇಕು. ದಿನನಿತ್ಯ ದುಡಿಯುವ ಕೂಲಿ ಕಾರ್ಮಿಕರು ಮತ್ತು ಅಸಂಘಟಿತ ವಲಯದ ಕಾರ್ಮಿಕರಿಗೆ "ವರ್ಕ್ ಫ್ರಮ್ ಹೋಂ" ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ಒಂದು ವರ್ಷ ಚಿನ್ನ ಖರೀದಿ ಮಾಡಬೇಡಿ ಎಂಬ ಹೇಳಿಕೆಯಿಂದ ಚಿನ್ನ ವ್ಯಾಪಾರಿಗಳು ಹಾಗೂ ಅವಲಂಬಿತ ಕಾರ್ಮಿಕರ ಜೀವನ ಸಂಕಷ್ಟಕ್ಕೆ ಸಿಲುಕಲಿದೆ. ಈಗಾಗಲೇ ದುಡಿದು ವಾಹನ ಖರೀದಿಸಿರುವ ಬಡ ಹಾಗೂ ಮಧ್ಯಮ ವರ್ಗದ ಜನರು ಮತ್ತೆ ಎಲೆಕ್ಟ್ರಿಕ್ ವಾಹನಗಳನ್ನು ಖರೀದಿಸಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ಕೇಂದ್ರ ಸರ್ಕಾರ ತನ್ನ ವೈಫಲ್ಯವನ್ನು ಜನರ ಮೇಲೆ ಹೊರೆ ಹಾಕುವುದನ್ನು ಬಿಟ್ಟು ಬಡ ಹಾಗೂ ಮಧ್ಯಮ ವರ್ಗದ ಜನರ ಬದುಕು ರಕ್ಷಿಸುವ ಕೆಲಸ ಮಾಡಬೇಕು ಎಂದು ಇಮ್ತಿಯಾಜ್ ಆರ್. ಮಾನ್ವಿ ಹಾಗೂ ಮೌಲಾಸಾಬ್ ಹೆಚ್. ಗಚ್ಚಿ ಆಗ್ರಹಿಸಿದ್ದಾರೆ.

> "ದೇಶದ ಶ್ರೀಮಂತರಿಗೆ ಯಾವುದೇ ತೊಂದರೆ ಆಗುವುದಿಲ್ಲ. ಆದರೆ ಕೋಟ್ಯಂತರ ಕೂಲಿ ಕಾರ್ಮಿಕರು ಹಾಗೂ ಅಸಂಘಟಿತ ವಲಯದ ಜನರ ಬದುಕು ಮತ್ತಷ್ಟು ಕಷ್ಟಕರವಾಗಲಿದೆ. ದಿನನಿತ್ಯ ದುಡಿಯುವ ಕಾರ್ಮಿಕರಿಗೆ 'ವರ್ಕ್ ಫ್ರಮ್ ಹೋಂ' ಹೇಗೆ ಸಾಧ್ಯ? ಈಗಾಗಲೇ ದುಡಿದು ವಾಹನ ಖರೀದಿಸಿರುವ ಬಡ ಮತ್ತು ಮಧ್ಯಮ ವರ್ಗದ ಜನರು ಮತ್ತೆ ಎಲೆಕ್ಟ್ರಿಕ್ ವಾಹನ ಖರೀದಿಸಲು ಸಾಧ್ಯವೇ?"
> **– ಇಮ್ತಿಯಾಜ್ ಆರ್. ಮಾನ್ವಿ,** ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka